# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 257 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 02–05–2024 ಗುರುವಾರ | ಪುಟ: 4 | ಬೆಲೆ : ರೂ.2–00

Volume - 01 Issue - 257 | Title- Code: KARKAN 28269 | Chitradurga | Date: 02-05-2024 Thursday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಚೆಕ್ ಪೋಸ್ಟ್ ಕರ್ತವ್ಯ ನಿರ್ಲಕ್ಷ್ಯ: ಎಇಇ, ಬಿಲ್ ಕಲೆಕ್ಟರ್ ಅಮಾನತು 2

ಮಟಮಟ ಮಧ್ಯಾಹ್ನಕ್ಕೆ ರಸ್ತೆಗಳು ಭಣಭಣ. ಶೇ.50ಕ್ಕೂ ಹೆಚ್ಚು ವ್ಯಾಪಾರ ಕುಸಿತ 3

ಸಾಧನೆಯ ಶಿಖರವೇರಲು ನಾವು ಮಾಡಬೇಕಾದ ಪ್ರಯತ್ನ 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಬಿಸಿಗಾಳಿಗೆ ತತ್ತರಿಸಿದ ಕೋಟೆನಾಡು

# ಆರೋಗ್ಯ ಇಲಾಖೆ ಸಲಹೆ ತಪ್ಪದೇ ಪಾಲಿಸಿ



**ದೇಹದಲ್ಲಿ ಈ ಲಕ್ಷಣ ಕಂಡು ಬಂದರೆ ಕೂಡಲೇ ವೈದ್ಯರನ್ನು ಸಂಪರ್ಕಿಸಿ**

- ಅರೆ ಪ್ರಜ್ಞಾವಸ್ಥೆ. ಪ್ರಜ್ಞೆ ತಪ್ಪುವುದು ಸಿಡಿಮಿಡಿಗೊಳ್ಳುವುದು
- ದ್ವಂದ್ವ, ಗಾಬರಿಗೊಳ್ಳುವುದು ಅಥವಾ ಕೋಮಾ ಸ್ಥಿತಿಯನ್ನು ತಲುಪುವುದು.
- ಬಿಸಿ ಹಾಗೂ ಕೆಂಪಾದ ಒಣ ಚರ್ಮ, ದೇಹದ ಉಷ್ಣತೆ 40°C or 104°F
- ಮಾಂಸ ಖಂಡಗಳಲ್ಲಿ ಸುಸ್ತು ಅಥವಾ ಸೆಳೆತ, ವಾಕರಿಕೆ ಮತ್ತು ವಾಂತಿ
- ಕನಿಷ್ಠ ಮೂತ್ರ ವಿಸರ್ಜನೆಯ ಪ್ರಮಾಣ, ಬಾಯಿ ಒಣಗುವಿಕೆ ಹಾಗೂ ಗುಳಿ ಬಿದ್ದ ಕಣ್ಣುಗಳು
- ಅಲಸ್ಯ, ಅರೆ ಪ್ರಜ್ಞಾವಸ್ಥೆ, ದೇಹದ ಯಾವುದೇ ಭಾಗದಲ್ಲಿ ರಕ್ತಸ್ರಾವ
- ಹೆಚ್ಚಿದ ಹೃದಯದ ಬಡಿತ, ವೇಗವಾದ

**ಪ್ರಥಮ ಚಿಕಿತ್ಸಾ ಕ್ರಮಗಳು**

- ವ್ಯಕ್ತಿಯನ್ನು ತಣ್ಣಗಿನ ಸ್ಥಳದಲ್ಲಿ ಮಲಗಿಸಿ ದೇಹವನ್ನು ಒದ್ದೆ ಬಟ್ಟೆಯಿಂದ ಒರೆಸಬೇಕು, ಕುಡಿಯಲು ಆಗಾಗ್ಗೆ ನೀರನ್ನು ಕೊಡುವುದು
- ವ್ಯಕ್ತಿಯು ಚೇತರಿಸಿಕೊಂಡ ನಂತರ ನೀರಿನ, ಹೊರಾಂಗಣದಲ್ಲಿ ಕೆಲಸ ಮಾಡುವಾಗ ಆಗಾಗ್ಗೆ ವಿಶ್ರಾಂತಿ ಪಡೆಯಿರಿ

**ರಕ್ಷಿಸಿಕೊಳ್ಳುವುದು ಹೇಗೆ ?**

- ಮಧ್ಯಾಹ್ನದ ಸಮಯದಲ್ಲಿ ಶ್ರಮದಾಯಕ ಕೆಲಸ ಮಾಡಬೇಡಿ, ಹೆಚ್ಚು ನೀರನ್ನು ಕುಡಿಯಿರಿ
- ಹೆಚ್ಚು ಸಕ್ಕರೆಯುಕ್ತ ಪಾನೀಯ/ಕಾರ್ಬೋನೇಟೆಡ್ ಪಾನೀಯಗಳನ್ನು ಕುಡಿಯಬೇಡಿ. ಇದರಿಂದ ನಿರ್ಜಲೀಕರಣ ಉಂಟಾಗುತ್ತದೆ

**ಡಿಹೆಚ್ಓ ಹೇಳಿದ್ದಿಷ್ಟು**

3-4 ದಿನ ಬಿಸಿಗಾಳಿ ಬೀಸಲಿದೆ. ಜನರು ಅನಗತ್ಯವಾಗಿ ಮಧ್ಯಾಹ್ನದ ವೇಳೆ ಮನೆಯಿಂದ ಹೊರಬರಬಾರದು. ಈ ಕುರಿತ ಜನಜಾಗೃತಿ ಕಾರ್ಯ ಕೈಗೆತ್ತಿಕೊಳ್ಳಲಾಗಿದೆ. ಅನಗತ್ಯ ಓಡಾಟ ನಿಲ್ಲಿಸಿ. ಅಗತ್ಯವಿದ್ದರೆ ಮಾತ್ರ ಮನೆಯಿಂದ ಹೊರ ಬನ್ನಿ.

» **ಡಾ.ಜಿ.ಪಿ.ರೇಣುಪ್ರಸಾದ್ ಜಿಲ್ಲಾ ಆರೋಗ್ಯ, ಕುಟುಂಬ ಕಲ್ಯಾಣಾಧಿಕಾರಿ**

» **ನಮ್ಮಜನ ಸಮಾಚಾರ**

ಚಿತ್ರದುರ್ಗ: ಕೋಟೆ ನಾಡು ಚಿತ್ರದುರ್ಗ ಜಿಲ್ಲೆಯಲ್ಲಿ ಪ್ರತಿ ವರ್ಷ ಸಹ ಬೇಸಿಗೆಯಲ್ಲಿ ಕೇವಲ ಬಿಸಿಲಿನ ತಾಪಮಾನ ಅನುಭವ ಪಡೆಯುತ್ತಿದ್ದರು ಅದು ಏನೋ ಮ್ಯಾನೇಜ್ ಆಗುತ್ತಿತ್ತು. ಅಷ್ಟೇನೂ ಜನರು ಆಘಾತಕ್ಕೆ ಒಳಗಾಗುತ್ತಿರಲಿಲ್ಲ.

ಆದರೆ ಈ ಬಾರಿ ಸೂರ್ಯಘಾತಕ್ಕೆ ಜನರಲ್ಲಿ ಆತಂಕ ತಂದಿದೆ. ನಿತ್ಯದ ವಾತಾವರಣದಲ್ಲಿ ಉಷ್ಣಾಂಶ ದಾಖಲೆಯನ್ನೇ ಬರೆಯುತ್ತಿದೆ. ದಿನದ 24 ತಾಸು ಹಿಂದೆಂದೂ ಕಾಣದಂತಹ ಬಿಸಿಗಾಳಿ ಬೀಸುತ್ತಿದೆ.ಜಿಲ್ಲೆಯಲ್ಲಿ ಬುಧವಾರ ಬೆಳಿಗ್ಗೆ 33 ಡಿಗ್ರಿ ಸೆಲ್ಸಿಯಸ್‌ನಿಂದ ಪ್ರಾರಂಭವಾಗಿ ಮಧ್ಯಾಹ್ನ ವೇಳೆಗೆ 40 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ವರದಿಯಾಗಿದೆ. ಮೇ ತಿಂಗಳ 4 ರವರೆಗೆ ಚಿತ್ರದುರ್ಗ ಜಿಲ್ಲೆಗೆ ಹವಾಮಾನ ಇಲಾಖೆ ಆರೇಂಜ್ ಅಲರ್ಟ್ ನೀಡಿದೆ. ಈ ಅವಧಿಯಲ್ಲಿ ಶಾಖದ ಅಲೆಗಳು ಹೆಚ್ಚಾಗುವ ಸಾಧ್ಯತೆ ಇದೆ ಎಂದು ಇಲಾಖೆ ಮುನ್ಸೂಚನೆ ನೀಡಿದೆ.

**ಮೇ 4 ರ ತನಕ ಬಿಸಿಲಿನ ತಾಪದಿಂದ ಮುಕ್ತಿಯಿಲ್ಲ** : ಮೇ 4ರವರೆಗೆ ಗರಿಷ್ಠ ತಾಪಮಾನ 2ರಿಂದ 3 ಡಿಗ್ರಿ ಸೆಲ್ಸಿಯಸ್ ಏರುವ ಲಕ್ಷಣ ಸ್ಪಷ್ಟವಾಗಿದೆ. ಬೆಳಿಗ್ಗೆ 7 ಗಂಟೆಯಿಂದಲೇ ಬಿಸಿಲು ಚುರುಕು ಮುಟ್ಟಿಸುತ್ತಿದೆ. ಬೆಳಗ್ಗೆಯಿಂದ ನಿಧಾನವಾಗಿ ಬಿಸಿಲು ಏರುತ್ತ 10 ಗಂಟೆ ಸುಮಾರಿಗೆ 34 ಡಿಗ್ರಿ ಸೆಲ್ಸಿಯಸ್ ಗಡಿ ದಾಟುತ್ತಿದೆ. ಬೀದಿಬದಿಯ ವ್ಯಾಪಾರಿಗಳು, ವೃದ್ದರು, ಮಕ್ಕಳು ಬಿಸಿಗಾಳಿ ಹೊಡೆತಕ್ಕೆ ಹೈರಾಣಗಿ ಹೋಗಿದ್ದಾರೆ.

**ರಸ್ತೆ ಅಗಲೀಕರಣಕ್ಕೆ ಕೊಟ್ಟ ಕೊಡಲಿ ಪೆಟ್ಟಿಗೆ ಹೆಚ್ಚಿದ ತಾಪ** : ಕಳೆದ ಮೂರು ವರ್ಷಗಳ ಹಿಂದೆ ನಗರದಲ್ಲಿ ಎಲ್ಲಾ ಕಡೆ ಬೃಹತ್ ಆಕಾರಣ ಮರಗಳು ಸಂಖ್ಯೆ ಹೆಚ್ಚಿತ್ತು. ಆದರೆ, ರಸ್ತೆ ವಿಸ್ತರಣೆ ಸಮಯದಲ್ಲಿ ಮರಗಳನ್ನು ಕಡಿದ ಪರಿಣಾಮ ರಸ್ತೆಯಲ್ಲಿ ಜನರು ನೆರಳಿಗಾಗಿ ಪರದಾಡುವ ಪರಿಸ್ಥಿತಿ ಎದುರಾಗಿದ್ದು. ಮತ್ತೊಂದೆಡೆ ಕಾಂಕ್ರಿಟ್ ರಸ್ತೆಯ ಕಾವು ಬಿಸಿಗಾಳಿಯನ್ನು ಮತ್ತಷ್ಟು ಹೆಚ್ಚಿಸಿದ್ದು ಬಹುತೇಕ ಮಧ್ಯಾಹ್ನದ ವೇಳೆಗೆ ರಸ್ತೆಗಳಲ್ಲಿ ವಾಹನ ಸಂಖ್ಯೆ ತುಂಬಾ ಕಡಿಮೆಯಾಗಿದೆ.

**ಎಳನೀರು, ಮಜ್ಜಿಗೆ , ಜ್ಯೂಸ್ ಗೆ ಡಿಮ್ಯಾಂಡ್:** ಜನರು ಮನೆಯಿಂದ ಹೊರ ಬಂದರೆ ಸಾಕು ಬಿಸಿಲಿನ ಹೊಡೆತಕ್ಕೆ ನೆರಳು ಹುಡುಕುವ ಜೊತೆಗೆ ಹೊಟ್ಟೆ ತಣ್ಣಗಿರಲಪ್ಪ ಅಂತ ಹೇಳಿ ತಂಪು ಪಾನೀಯಕ್ಕೆ ಮೊರೆ ಹೋಗುತ್ತಿದ್ದಾರೆ.


ಪುಟ ↘ 3


## ಫಾಸ್ಟ್ ನ್ಯೂಸ್

### ಲೋಕಸಭಾ ಚುನಾವಣೆ: ಮತದಾನ ಜಾಗೃತಿ, ಪೆಟ್ಸ್ ರ್‍ಯಾಂಪ್ ವಾಕ್

» ದಾವಣಗೆರೆ

ಲೋಕಸಭಾ ಚುನಾವಣೆ ಪ್ರಯುಕ್ತ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸ್ವೀಪ್ ಸಮಿತಿ, ಹಾಗೂ ಜಿಲ್ಲಾ ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಮೇ 1 ರಂದು ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜು ಬಾಸ್ಕೆಟ್ ಬಾಲ್ ಗ್ರೌಂಡ್ ನಲ್ಲಿ ಪೆಟ್ಸ್ ರ್‍ಯಾಂಪ್‌ವಾಕ್ ಮೂಲಕ ಮತದಾನ ಜಾಗೃತಿ ಮೂಡಿಸಲಾಯಿತು. ಕಾರ್ಯಕ್ರಮವನ್ನು ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಮಲ್ಲನಾಯಕ್ ಉದ್ಘಾಟಿಸಿದರು.ಪಶುಪಾಲನ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ ಉಪ ನಿರ್ದೇಶಕ ಡಾ. ಚಂದ್ರಶೇಖರ್ ಅಧ್ಯಕ್ಷತೆ ವಹಿಸಿದ್ದರು.ಅತಿಥಿಗಳಾಗಿ ಜಿಲ್ಲಾ ಆಯುಷ್ ಅಧಿಕಾರಿ ಡಾ. ಯೋಗೇಂದ್ರ ಕುಮಾರ್, ನಿವೃತ್ತ ಉಪ ನಿರ್ದೇಶಕ ಡಾ. ವೀರೇಶ್ ಪಾಲಿಕೆರೆ, ಹರಿಹರ ಪಾಲಿಟೆಕ್ನಿಕ್ ನಿವೃತ್ತ ಪ್ರಿನ್ಸಿಪಾಲ್ ಶ್ರೀನಿವಾಸ್ ಉಪಸ್ಥಿತರಿದ್ದರು.




# ಕರ್ತವ್ಯ ನಿರತ ಮತದಾರರಿಂದ ಅಂಚೆ ಮತದಾನ

» **ದಾವಣಗೆರೆ**

ದಾವಣಗೆರೆ ಲೋಕಸಭಾ ಕ್ಷೇತ್ರಕ್ಕೆ ಮೂರನೇ ಹಂತ ಮೇ 7 ರಂದು ಮತದಾನ ನಡೆಯುತ್ತದೆ. ಅಗತ್ಯ ಸೇವೆಯಲ್ಲಿ ತೊಡಗಿರುವ ಜಿಲ್ಲೆಯ ಮತ್ತು ಇತರೆ ಜಿಲ್ಲೆಯಲ್ಲಿನ ಮತದಾರರು ಮತ್ತು ದಾವಣಗೆರೆ ಜಿಲ್ಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು ಮತದಾನ ದಿನ ಚುನಾವಣಾ ಕರ್ತವ್ಯದಲ್ಲಿ ತೊಡಗಿರುವ ಹೊರ ಜಿಲ್ಲೆಯ ಅಧಿಕಾರಿ, ಸಿಬ್ಬಂದಿಗಳು ಜಿಲ್ಲಾಡಳಿತ ಭವನದ ಪಕ್ಕದಲ್ಲಿನ ಸ್ಮಾರ್ಟ್‌ಸಿಟಿ ಕಟ್ಟಡದಲ್ಲಿ ಸ್ಥಾಪಿಸಲಾದ ಮತದಾನ ಸೌಲಭ್ಯ ಕೇಂದ್ರದಲ್ಲಿ ಮೇ 1 ರಂದು 228 ಮತದಾರರು ಮತದಾನ ಮಾಡಿದರು.




ಅಗತ್ಯ ಸೇವಾ ಇಲಾಖೆ ಮತದಾರರು ಮತ್ತು ಮತದಾನ ದಿನ ಚುನಾವಣಾ ಕರ್ತವ್ಯದಲ್ಲಿ ತೊಡಗಿದವರಿಗೆ ಮತದಾನ ಮಾಡಲು ಮೇ 1, 2 ಮತ್ತು 3 ರಂದು ಅಂಚೆ ಮತದಾನಕ್ಕೆಅವಕಾಶಮಾಡಿಕೊಡಲಾಗಿದೆ. ಅಗತ್ಯ ಸೇವಾ ಇಲಾಖೆಯಲ್ಲಿ ಕೆಲಸ ಮಾಡುತ್ತಿದ್ದು ದಾವಣಗೆರೆ ಲೋಕಸಸಭಾ ಕ್ಷೇತ್ರದ ಮತದಾರರಾಗಿ ದಾವಣಗೆರೆ ಜಿಲ್ಲೆ ಸೇರಿದಂತೆ ಇತರೆ ಜಿಲ್ಲೆಗಳಲ್ಲಿ ಕರ್ತವ್ಯ ನಿರತ 901 ಮತದಾರರು ಅಂಚೆ ಮತದಾನಕ್ಕಾಗಿ 12ಡಿ ರಡಿ ಘೋಷಣೆ ಮಾಡಿಕೊಂಡಿದ್ದರು. ಇತರೆ ಜಿಲ್ಲೆಯಲ್ಲಿದ್ದರೂ ದಾವಣಗೆರೆಗೆ ಬಂದು ಮತದಾನ ಮಾಡಬೇಕು. ಇವರಿಗೆ ಬಂದು ಮತದಾನ ಮಾಡಲು ಅನ್ಯ ಕಾರ್ಯನಿಮಿತ್ತ ರಜಾ ಸೌಲಭ್ಯವಿತ್ತದೆ. ಮೇ.1 ರಂದು ಅಗತ್ಯ ಸೇವಾ ಇಲಾಖೆ 153 ಮತದಾರರು ಅಂಚೆ ಮತದಾನ ಮಾಡಿದರು.

ಮತದಾನ ದಿನ ಚುನಾವಣಾ ಕರ್ತವ್ಯದಲ್ಲಿ ನಿರತರಾಗಿರುವ ಇತರೆ ಜಿಲ್ಲೆ ಮೂರನೇ ಹಂತದಲ್ಲಿ ಚುನಾವಣೆ ನಡೆಯುವ ಕ್ಷೇತ್ರದ ಮತದಾರರಾಗಿದ್ದು ಮೇ 7 ರಂದು ದಾವಣಗೆರೆ ಕ್ಷೇತ್ರದಲ್ಲಿ ಚುನಾವಣಾ ಕರ್ತವ್ಯದಲ್ಲಿ ನಿರತಾಗಿರುವ 1128 ಮತದಾರರಲ್ಲಿ 75 ಅಧಿಕಾರಿಗಳು, ಸಿಬ್ಬಂದಿಯವರು ಮೇ 1 ರಂದು ಮತದಾನ ಮಾಡಿದರು.

ಅಪರ ಜಿಲ್ಲಾಧಿಕಾರಿಯಿಂದ ಮತದಾನ; ಅಪರ ಜಿಲ್ಲಾಧಿಕಾರಿ ಸೈಯ್ಯದಾ ಆಫ್ರೀನ್ ಭಾನು ಅವರು ಬೆಳಗಾವಿ ಲೋಕಸಭಾ ಕ್ಷೇತ್ರದ ಮತದಾರರಾಗಿದ್ದು ಅವರು ದಾವಣಗೆರೆಯಲ್ಲಿ ಮತದಾನ ದಿನ ಚುನಾವಣಾ ಕರ್ತವ್ಯದಲ್ಲಿ ತೊಡಗಿರುವುದರಿಂದ ದಾವಣಗೆರೆ ಅಂಚೆ ಸೌಲಬ್ಯ ಕೇಂದ್ರ ಸ್ಮಾರ್ಟ್‌ಸಿಟಿಯಲ್ಲಿ ಮತದಾನ ಮಾಡಿದರು. ಭೂ ಮಾಪನ ಇಲಾಖೆ ಉಪನಿರ್ದೇಶಕರು ಹಾಗೂ ಹರಿಹರ ಕ್ಷೇತ್ರದ ಸಹಾಯಕ ಚುನಾವಣಾಧಿಕಾರಿ ಭಾವನ ಅವರು ಧಾರವಾಡ ಲೋಕಸಭಾ ಕ್ಷೇತ್ರದ ಮತದಾರರಾಗಿದ್ದು ಅವರು ಮತದಾನ ದಿನ ದಾವಣಗೆರೆಯಲ್ಲಿ ಚುನಾವಣಾ ಕರ್ತವ್ಯದಲ್ಲಿ ತೊಡಗುವುದರಿಂದ ಅವರು ಅಂಚೆ ಮತದಾನದ ಮೂಲಕ ಮತ ಚಲಾಯಿಸಿದರು.

ಚುನಾವಣಾ ಆಯೋಗವು ಈ ಚುನಾವಣೆಯಲ್ಲಿ 16 ಅಗತ್ಯ ಸೇವಾ ಇಲಾಖೆಯಡಿ ಕೆಲಸ ಮಾಡುತ್ತಿರುವ ಅಂದರೆ ಮತದಾನ ದಿನ ಮತಗಟ್ಟೆಗೆ ಹೋಗಿ ಮತ ಹಾಕಲು ಸಾಧ್ಯವಾಗದ ಇಲಾಖೆ ಅಧಿಕಾರಿ, ಸಿಬ್ಬಂದಿಗಳಿಗೆ ಈ ಅವಕಾಶ, ಇದಕ್ಕಾಗಿ 12ಡಿ ರಡಿ ಘೋಷಣೆ ಮಾಡಿರಬೇಕು. ಮತ್ತು ಚುನಾವಣಾ ದಿನ ಮತಗಟ್ಟೆ ಕರ್ತವ್ಯದಲ್ಲಿ ತೊಡಗಿದವರಿಗೆ ಅಂಚೆ ಮತದಾನಕ್ಕೆ ಬ್ಯಾಲೆಟ್‌ನ್ನು ಅವರ ವಿಳಾಸಕ್ಕೆ ಕಳುಹಿಸಿಕೊಡಲಾಗುತ್ತಿತ್ತು. ಆದರೆ ಈ ಚುನಾವಣೆಯಲ್ಲಿ ಅಂಚೆ ಮತಪತ್ರವನ್ನು ಮನೆಗೆ ಕಳುಹಿಸದೇ ಸೌಲಭ್ಯ ಕೇಂದ್ರದಲ್ಲಿ ಬಂದು ಅಲ್ಲಿಯೇ ಪಡೆದು ಮತದಾನ ಮಾಡಬೇಕು. ಇಂತಹ ಸುಧಾರಣೆ ತರುವ ಮೂಲಕ ಆಯೋಗ ಅಂಚೆ ಮತಪತ್ರ ಮತ್ತು ಮತದ ಗೌಪ್ಯತೆಗೆ ಹೆಚ್ಚಿನ ಆದ್ಯತೆ ನೀಡಿರುವುದು ವಿಶೇಷವಾಗಿದೆ.

ಮೇ.2 ಮತ್ತು 3 ರಂದು ಸ್ಮಾರ್ಟ್‌ಸಿಟಿ ಕಟ್ಟಡದಲ್ಲಿಸ್ಥಾಪಿಸಿರುವಸೌಲಭ್ಯಕೇಂದ್ರದಲ್ಲಿ ಅಂಚೆ ಮತದಾನ ನಡೆಯಲಿದೆ.

# ಆರೋಪಿ ಪ್ರಜ್ವಲ್‌ಗೆ ಗಲ್ಲು ಶಿಕ್ಷೆ ವಿಧಿಸಿ

» **ಚಿತ್ರದುರ್ಗ**

ಸಂಸದ ಪ್ರಜ್ವಲ್ ರೇವಣ್ಣನಿಂದ ಅನೇಕರ ಮೇಲೆ ಅತ್ಯಾಚಾರ, ಲೈಂಗಿಕ ರಾಸಲೀಲೆ ಹಿನ್ನೆಲೆಯಲ್ಲಿ ಗಲ್ಲು ಶಿಕ್ಷೆ ಕೊಡಬೇಕು ಅಪ್ರಾಪ್ತ ಬಾಲಕಿಯರು ಇದರಲ್ಲಿ ಇದ್ದು ಕೂಡಲೇ ಪೋಕ್ಸೋ ಸುಮೋಟೋ ಕೇಸು ದಾಖಲು ಮಾಡಲು ಹಿರಿಯ ವಕೀಲ ಡಾ. ಎಂ.ಸಿ.ನರಹರಿ ಸರ್ಕಾರವನ್ನು ಆಗ್ರಹಿಸಿದ್ದಾರೆ.



ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ದೇವೇಗೌಡರೇ ನಿಮ್ಮ ಮನೆಯ ಮಾನ ಮರ್ಯಾದೆ ಮತ್ತು ಪಕ್ಷದ ಮಾನ ಮೊಮ್ಮಗನಿಂದಲೇ ಹರಾಜಾಗಿದೆ. ದೇವೇಗೌಡರೇ ನಿಮ್ಮ ಜೆಡಿಎಸ್ ಪಕ್ಷದ ಚಿನ್ಹೆಯನ್ನು ಚೇಂಜ್ ಮಾಡಿಕೊಳ್ಳಿ ಎಂದು ಆಗ್ರಹಿಸಿದ್ದಾರೆ. ಅಜ್ಜ ಪ್ರಧಾನಿ,ಅಪ್ಪ ಸಚಿವ, ಚಿಕ್ಕಪ್ಪ ಮುಖ್ಯಮಂತ್ರಿ, ಆಂಟಿ ಶಾಸಕಿ, ಅಮ್ಮ ಜಿಪಂ ಸದಸ್ಯೆ, ತಮ್ಮ ಎಂ ಎಲ್ ಸಿ ಆಗಿದ್ರು ಇವನು ಎಂಪಿ. ಲೋಫರ್. ಭಾರತ ಕಂಡ ಲಂಪಟ ಸಂಸದ ಇದು ಭಾರತಾಂಬೆ ಭಾರತ ಮಾತೆ ಹೆಸರು ಹೇಳುವ ಬಿಜೆಪಿ ಗೆ ಅತ್ಯಂತ ಮುಜುಗರ. ಇದು ಕಮಲದ ಕರ್ಮವಾಗಿದೆ ಜೆಡಿ ಎಸ್ ತೆನೆಹೊತ್ತ ಮಹಿಳಾ ಗುರುತಿಗೆ ನಿಜಕ್ಕೂ ಅವಮಾನ ವಾಗಿದೆ ಎಂದರು.

ಪ್ರಜ್ವಲ್ ರೇವಣ್ಣ ಲೈಂಗಿಕ ದೌರ್ಜನ್ಯ ಪ್ರಕರಣ ಸಂಬಂಧ ಮಹಿಳಾ ಆಯೋಗದ ಬಳಿಕ ಈಗ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಎಂಟ್ರಿ ಕೊಟ್ಟಿದೆ. ಈ ಪ್ರಕರಣ ಸಂಬಂಧ ವಿಶೇಷ ತನಿಖಾ ತಂಡ ಮುಖ್ಯಸ್ಥ ಬಿಜಯ್ ಕುಮಾರ್ ಸಿಂಗ್‌ಗೆ ಮಕ್ಕಳ ರಕ್ಷಣಾ ಆಯೋಗದ ಅಧ್ಯಕ್ಷ ಕೆ.ನಾಗಣ್ಣಗೌಡ ಪತ್ರ ಬರೆದಿದ್ದಾರೆ.

ಸಂತ್ರಸ್ತೆ ಒಬ್ಬರು ತನ್ನ ಮಗಳ ಜೊತೆ ಕೂಡ ಅಸಭ್ಯವಾಗಿ ವರ್ತಿಸಿರುವ ಬಗ್ಗೆ ಮಾಧ್ಯಮದಲ್ಲಿ ಹೇಳಿಕೆ ನೀಡಿದ್ದು ಪ್ರಕರಣದಲ್ಲಿ ಆರೋಪಿ ಅಪ್ರಾಪ್ತ ಹೆಣ್ಣು ಮಕ್ಕಳನ್ನ ಬಳಸಿಕೊಂಡಿರುವ ಬಗ್ಗೆ ಮೇಲ್ನೋಟಕ್ಕೆ ಅನುಮಾನ ಇದೆ. ಹಾಗಾಗಿ ಪ್ರಕರಣದಲ್ಲಿ ಆರೋಪಿಯಿಂದ ಅಪ್ರಾಪ್ತ ಹೆಣ್ಣು ಮಕ್ಕಳ ಬಳಕೆ ಪತ್ತೆಯಾದಲ್ಲಿ ಈ ಬಗ್ಗೆ ವರದಿ ನೀಡುವಂತೆ ಎಸ್‌ಐಟಿಗೆ ಪತ್ರ ಬರೆದಿದ್ದಾರೆ

ಅಂಬೇಡ್ಕರ್‌ಬರೆದಸಂವಿಧಾನದ ಮಾನಹರಣವಾಗಿದೆ. ಸಂಸತ್‌ನಲ್ಲಿ ಧ್ವನಿಯಾಗಬೇಕಾಗಿದ್ದವೇ ಕಾಮುಕನಾಗಿದ್ದಾನೆ. ಲೈಂಗಿಕ ಕೃತ್ಯಕ್ಕೆ ಬಳಸಿಕೊಂಡಿರುವರಲ್ಲಿ ಅವಿವಾಹಿತ ಯುವತಿಯರಿದ್ದು ಅವರನ್ನು ಪ್ರಜ್ವಲ್ ವಿವಾಹವಾಗಲಿ ತೆನೆ ಹೊತ್ತ ಮಹಿಳೆ ಬದಲು ಜನ ಪೆನ್ ಡ್ರೈವ್ ಹೊತ್ತ ಮಹಿಳಾ ಎನ್ನುತ್ತಿದ್ದಾರೆ. ಜೂನಿಯರ್ ದೇವೇಗೌಡರನ್ನು ಕೂಡಲೇ ಜರ್ಮನ್‌ನಲ್ಲೇ ಬಂಧಿಸಲಿ. ಒಂದು ವೇಳೆ ಅಪ್ರಾಪ್ತರ ಮೇಲೆ ಲೈಂಗಿಕ ದೌರ್ಜನ್ಯ ನಡೆದಿದ್ದರೆ ಆಯೋಗ ಪೋಕ್ಸೋ ಪ್ರಕರಣದಡಿ ದೂರು ದಾಖಲಿಸಲು ವಕೀಲ ಡಾ. ಎಂ.ಸಿ.ನರಹರಿ ಆಗ್ರಹಿಸಿದ್ದಾರೆ.



ದಾವಣಗೆರೆ ಬಿಜೆಪಿ ಹಿಂದುಳಿದ ವರ್ಗಗಳ ಉಪಾಧ್ಯಕ್ಷೆ ಶೋಭಾ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಸಮ್ಮುಖದಲ್ಲಿ ಕಾಂಗ್ರೆಸ್ ಸೇರ್ಪಡೆಯಾದರು.

## ಪರಶುರಾಂಪುರ; ಅಪರಾಧ ತಡೆ: ಪೊಲೀಸರೊಂದಿಗೆ ಸಹಕರಿಸಿ



**ಪರಶುರಾಂಪುರ:** ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಯಾವುದಾದರೂ ಸಮಸ್ಯೆಗಳು ಕಂಡು ಬಂದಲ್ಲಿ ಮುಕ್ತವಾಗಿ ಬಂದು ಪೊಲೀಸರಿಗೆ ತಿಳಿಸಿ ಅಪರಾಧ ತಡೆಗಟ್ಟಲು ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳು ಸಹಕರಿಸಬೇಕು ಎಂದು ಎಎಸ್‌ಐ ಪ್ರಶಾಂತ್ ಕುಮಾರ್ ತಿಳಿಸಿದರು. ಗ್ರಾಮ ಸೇರಿದಂತೆ ಹೋಬಳಿ ವ್ಯಾಪ್ತಿಯ ಕಾಜೂರು,ಪುಟ್ಲೋರಹಳ್ಳಿ,ಪಗಡಲಬಂಡೆ ಸೇರಿದಂತೆ ಇನ್ನಿತರ ಕಡೆಗಳಲ್ಲಿ ಪೊಲೀಸ್ ಇಲಾಖೆಯ ವತಿಯಿಂದ ಆಯೋಜಿಸಿದ್ದ ಅಪರಾಧ ತಡೆಗಟ್ಟುವ ಜಾಗೃತಿ ಸಭೆಯಲ್ಲಿ ಮಾತನಾಡಿದರು. ಶಾಲಾ ಹಂತದಲ್ಲಿ ಮಕ್ಕಳು ಅನುಸರಿಸಬೇಕಾದ ಕಾನೂನು ನಿಯಮಗಳು ಮತ್ತು ರಸ್ತೆ ಸಂಚಾರದ ನಿಯಮಗಳ ಬಗ್ಗೆ ಪ್ರತಿಯೊಬ್ಬ ವಿದ್ಯಾರ್ಥಿಗಳು ತಿಳಿದುಕೊಳ್ಳಬೇಕು. ಪೊಲೀಸ್ ಎಂದರೆ ಭಯಬೇಡ. ಸಮಸ್ಯೆಗಳಿದ್ದರೆ ನೇರವಾಗಿ ಪೋಷಕರು ಮತ್ತು ಪೊಲೀಸರಿಗೆ ತಿಳಿಸಿ ಅಪರಾಧ ತಡೆಗಟ್ಟಲು ಸಹಕರಿಸಿ ಎಂದರು. ಬೆಲೆ ಬಾಳುವ ಬಂಗಾರದ ಆಭರಣಗಳನ್ನು ಧರಿಸಿಕೊಂಡ ಮಹಿಳೆಯರು ಸಾರ್ವಜನಿಕ ಸ್ಥಳಗಳಲ್ಲಿ ಎಚ್ಚರಿಕೆಯಿಂದ ಇರಬೇಕು.ಗ್ರಾಮೀಣ ಹಾಗೂ ನಗರ ಪ್ರದೇಶಗಳ ಮನೆಗಳಲ್ಲಿನ ಕಳ್ಳತನದ ಬಗ್ಗೆ ಜಾಗೃತರಾಗಬೇಕು. ಅಪರಾಧ ಕೃತ್ಯಗಳ ಕುರಿತು ಮೊಬೈಲ್‌ಗಳಿಗೆ ಕಳುಹಿಸುವ ಸಂದೇಶಗಳ ಬಗ್ಗೆ ಎಚ್ಚರದಿಂದ ಇರಬೇಕು. ಅಪರಾಧ ಕೃತ್ಯಗಳನ್ನ ಎಸಗಲು ಹಣದ ಆಮಿಷಕ್ಕೆ ಯಾರೂ ಬಲಿಯಾಗಬಾರದು.

## ಜಿಲ್ಲಾ ಕಟ್ಟಡ ಕಾರ್ಮಿಕರ ಸಂಘದಿಂದ
# ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಆಚರಣೆ

» **ಚಿತ್ರದುರ್ಗ**

ಕಾರ್ಮಿಕ ದಿನಾಚರಣೆಯ ಅಂಗವಾಗಿ ಜಿಲ್ಲಾ ಕಟ್ಟಡ ಕಾರ್ಮಿಕರ ಸಂಘದಲ್ಲಿ ಬುಧವಾರ ಸಿಹಿ ವಿತರಿಸುವ ಮೂಲಕ ಡಾ.ಬಿ.ಆರ್.ಅಂಬೇಡ್ಕರ್‌ರವರ ಜಯಂತಿ ಆಚರಿಸಲಾಯಿತು.



ಜಿಲ್ಲಾ ಕಟ್ಟಡ ಕಾರ್ಮಿಕರ ಸಂಘದ ಅಧ್ಯಕ್ಷ ವೈ.ತಿಪ್ಪೇಸ್ವಾಮಿ ಡಾ.ಬಿ.ಆರ್.ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡುತ್ತ ಕಳೆದ ಹದಿನಾರು ವರ್ಷಗಳಿಂದಲೂ ಜಿಲ್ಲೆಯಲ್ಲಿ ಕಾರ್ಮಿಕರಪರವಾಗಿ ಹೋರಾಟ ಮಾಡಿಕೊಂಡು ಬರಲಾಗುತ್ತಿದೆ. ರಾಜ್ಯ ಸರ್ಕಾರ ಕಾರ್ಮಿಕರಿಗೆ ಅನ್ಯಾಯವೆಸಗುತ್ತಿದೆ. ಕಾರ್ಮಿಕರು ಮತ್ತು ಮಕ್ಕಳ ಶಿಕ್ಷಣ ಹಾಗೂ ವಿವಾಹಕ್ಕೆ ಪ್ರೋತ್ಸಾಹ ಧನ ಸಿಗುತ್ತಿಲ್ಲ. ನೊಂದಣಿ ಕಾರ್ಡ್ ನೀಡದೆ ವಿಳಂಭ ನೀತಿ ಅನುಸರಿಸುತ್ತಿರುವುದರಿಂದ ಕಾರ್ಮಿಕರು ಸರ್ಕಾರದಿಂದ ಸಿಗುವ ಸೌಲತ್ತುಗಳಿಂದ ವಂಚಿತರಾಗುತ್ತಿದ್ದಾರೆಂದು ಅಸಮಾಧಾನ ವ್ಯಕ್ತಪಡಿಸಿದರು.

ಜಿಲ್ಲಾ ಕಟ್ಟಡ ಕಾರ್ಮಿಕರ ಸಂಘದ ತಾಲ್ಲೂಕು ಅಧ್ಯಕ್ಷ ಜಾವಿದ್‌ಭಾಷ, ಪ್ರಧಾನ ಕಾರ್ಯದರ್ಶಿಗಳಾದ ಪಿ.ಲಕ್ಷ್ಮಿದೇವಿ, ಎ.ನಾಗರಾಜು, ಉಪಾಧ್ಯಕ್ಷರುಗಳಾದ ಎಂ.ಮಲ್ಲಿಕಾರ್ಜುನ್ ಈ ಸಂದರ್ಭದಲ್ಲಿದ್ದರು.

**ಪ್ರಮುಖ ಸುದ್ದಿ**

# ಕಾರ್ಮಿಕರು, ರೈತರ ಬಗ್ಗೆ ಕೇಂದ್ರ ನಿರ್ಲಕ್ಷ್ಯ: ಮೋಹಿದ್ದೀನ್

» **ಚಿತ್ರದುರ್ಗ**

ಕೇಂದ್ರಸರ್ಕಾರಕಾರ್ಮಿಕರುಹಾಗೂರೈತರ ಬಗ್ಗೆ ನಿರ್ಲಕ್ಷ ಮನೋಭಾವ ತೋರುತ್ತಿದೆ. ಇವರಿಗೆ ಯಾವ ರೀತಿಯ ಸಹಾಯವನ್ನು ಸಹಾ ಮಾಡುತ್ತಿಲ್ಲ. ಆದರೆ ರಾಜ್ಯ ಸರ್ಕಾರ ಈ ಇಬ್ಬರ ಬಗ್ಗೆ ಮೃದುವಾದ ಧೋರಣೆ ತೋರುವುದರ ಮೂಲಕ ವಿವಿಧ ರೀತಿಯ ಸೌಲಭ್ಯ ಕಲ್ಪಿಸಿದೆ ಎಂದು ಜಿಲ್ಲಾ ಕಾಂಗ್ರೆಸ್ ಕಾರ್ಮಿಕ ವಿಭಾಗದ ಅಧ್ಯಕ್ಷ ಮೋಹಿದ್ದೀನ್ ತಿಳಿಸಿದರು.



ಚಿತ್ರದುರ್ಗ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಇಂದು ಜಿಲ್ಲಾ ಕಾಂಗ್ರೆಸ್ ಕಾರ್ಮಿಕ ವಿಭಾಗದಿಂದ ಹಮ್ಮಿಕೊಂಡಿದ್ದ ಕಾರ್ಮಿಕ ದಿನಾಚರಣೆಯಲ್ಲಿ ಭಾಗವಹಿಸಿ ಮಾತನಾಡಿದರು.

ಇಂದಿನ ದಿನದಲ್ಲಿ ಕಾರ್ಮಿಕರ ಶ್ರಮ ಅಧಿಕವಾಗಿದೆ ಅವರು ಇಲ್ಲದಿದ್ದರೆ ನಾವುಗಳು ಇರಲು ಆಗುವುದಿಲ್ಲ, ಅಲ್ಲದೆ ರೈತ ಮತ್ತು ಕಾರ್ಮಿಕ ಇಬ್ಬರು ಸಹಾ ದೇಶದ ಬೆನ್ನುಲು ಆಗಿದ್ದಾರೆ ಈ ಇಬ್ಬರು ಇಲ್ಲದಿದ್ದರೆ ನಮ್ಮ ಜೀವನ ಸಾಗುವುದಿಲ್ಲ, ದೇಶಕ್ಕೆ ವಿವಿಧ ರೀತಿಯಲ್ಲಿ ಸಹಾಯವನ್ನು ಮಾಡುತ್ತಿರುವ ರೈತ ಮತ್ತು ಕಾರ್ಮಿಕರಿಗೆ ಕೇಂದ್ರ ಸರ್ಕಾರ ಯಾವುದೇ ರೀತಿಯ ಸಹಾಯವನ್ನು ಮಾಡುತ್ತಿಲ್ಲ, ಇಬ್ಬರು ಬಗ್ಗೆಯೂ ನಿರ್ಲಕ್ಷ ಮಾಡುತ್ತಿದೆ ಎಂದು ಆರೋಪಿಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ರವರು ರೈತ ಮತ್ತು ಕಾರ್ಮಿಕರ ಬಗ್ಗೆ ವಿವಿಧ ರೀತಿಯ ಯೋಜನೆಯನ್ನು ನೀಡುವುದರ ಮೂಲಕ ಸೌಲಭ್ಯವನ್ನು ಕಲ್ಪಿಸಿದೆ, ಕಾರ್ಮಿಕ ಸಚಿವರಾದ ಸಂತೋಷ ಲಾಡ್ ರವರು ಕಾರ್ಮಿಕರ ಬಗ್ಗೆ ವಿಶೇಷವಾದ ಕಾಳಜಿಯನ್ನು ಹೊಂದಿದ್ದು, ಅವರ ಮಕ್ಕಳಿಗೆ ವಿಶೇಷವಾದ ರೀತಿಯ ಪ್ರಯೋಜನವನ್ನು ಕಲ್ಪಿಸಿದ್ದಾರೆ. ನಮ್ಮ ಪಕ್ಷವೂ ಸಹಾ ಕಾರ್ಮಿಕರ ಪರವಾಗಿ ಇದ್ದು ಅವರಿಗೆ ಸೌಲಭ್ಯಗಳನ್ನು ನೀಡುತ್ತಿದೆ ಎಂದರು. ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮೈಲಾರಪ್ಪ ಮಾತನಾಡಿ, ಕಾಂಗ್ರೆಸ್ ಪಕ್ಷ ಕಾರ್ಮಿಕರಿಗಾಗಿ ವಿವಿಧ ರೀತಿಯ ಸೌಲಭ್ಯಗಳನ್ನು ನೀಡಿದೆ, ಕಾರ್ಮಿಕರ ಮಕ್ಕಳಿಗೆ ಶಿಕ್ಷಣ, ಆರೋಗ್ಯದ ಬಗ್ಗೆ ಕಾಳಜಿಯನ್ನು ವಹಿಸಿ ಇದರ ಬಗ್ಗೆ ಸೌಲಭ್ಯಗಳನ್ನು ನೀಡಿದೆ. ಕಾರ್ಮಿಕರು ಇಲ್ಲದಿದ್ದರೆ ದೇಶದ ಪ್ರಗತಿ ಸಾಧ್ಯವಿಲ್ಲ ಇವರ ಕೂಡುಗೆ ಅಪಾರವಾಗಿದೆ. ಇದನ್ನು ನಾವುಗಳು ಮರೆಯಬಾರದು. ಗಾರ್ಮೆಂಟ್ಸ್, ಕಟ್ಟಡ ನಿರ್ಮಾಣ, ಕೈಗಾರಿಕೆ, ಬಡಗಿ, ಕುಂಬಾರ ಸೇರಿದಂತೆ ವಿವಿಧ ವಲಯಗಳಲ್ಲಿ ಕಾರ್ಮಿಕರು ತಮ್ಮ ಸೇವೆಯನ್ನು ಮಾಡುತ್ತಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಅಧ್ಯಕ್ಷತೆಯನ್ನುವಹಿಸಿದ್ದ ಜಿಲ್ಲಾ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರಾದ ಎಂ.ಕೆ.ತಾಜ್‌ಪೀರ್ ಮಾತನಾಡಿ, ದೇಶದ ವಿವಿಧ ವಲಯಗಳಲ್ಲಿ ಕಾರ್ಮಿಕ ವರ್ಗ ಕೆಲಸವನ್ನು ಮಾಡುತ್ತಿದೆ. ಈ ಹಿಂದೆ ಕಾಮೀಕರಿಗೆ ಸಮಯ ನಿಗಧಿಯಾಗಿರಲಿಲ್ಲ ಅಲ್ಲದೆ ವೇತನವೂ ಸಹಾ ಕಡಿಮೆ ಇತ್ತು ಇದರ ಬಗ್ಗೆ ಹೋರಾಟವನ್ನು ಮಾಡುವುದರ ಮೂಲಕ ದಿನಕ್ಕೆ 8 ಗಂಟೆ ಕೆಲಸ, ವಾರಕ್ಕೊಂದು ರಜೆ ಮತ್ತು ಸಮಾನ ಕೆಲಸಕ್ಕೆ ಸಮಾನ ವೇತನವನ್ನು ಪಡೆಯಲಾಯಿತು. ಕೃಷಿ, ಕಟ್ಟಡ ನಿರ್ಮಾಣ, ಕೈಗಾರಿಕೆ, ಮನೆಗೆಲಸ ಸೇರಿದಂತೆ ವಿವಿಧ ವಲಯಗಳಲ್ಲಿ ಕೆಲಸ ಮಾಡುವವರನ್ನು ಕಾರ್ಮಿಕರೆಂದು ಪರಿಗಣಿಸಲಾಗುತ್ತಿದೆ. ರೈತ ಮತ್ತು ಕಾರ್ಮಿಕರ ಪರಿಶ್ರಮದಿಂದ ದೇಶ ಪ್ರಗತಿಯನ್ನು ಕಾಣುತ್ತಿದೆ ಎಂದರು.

ರಾಜ್ಯ ಸರ್ಕಾರ ಕಾರ್ಮಿಕರಿಗೆ ವಿವಿಧ ರೀತಿಯ ಸೌಲಭ್ಯ ಮತ್ತು ಸಹಾಯವನ್ನು ಮಾಡುತ್ತಿದೆ. ಇ.ಎಸ್.ಐ, ಆರೋಗ್ಯ ವಿಮೆ, ಪ್ರಾವಿಡೆಂಡ್ ಫಂಡ್‌ಗಳನ್ನು ಸಂವಿಧಾನದತ್ತವಾಗಿ ಕಾನೂನು ರೀತಿಯಲ್ಲಿ ನೀಡಲಾಗುತ್ತಿದೆ. ರಾಜ್ಯ ಸರ್ಕಾರ ನೀಡಿದ ಗ್ಯಾರೆಂಟಿಗಳು ಈ ವರ್ಗಕ್ಕೆ ಬಹಳಷ್ಟು ಸಹಾಯವಾಗಿದೆ. ತೀರ ಕಷ್ಟದಲ್ಲಿ ಇರುವವರೆಗೆ ನಮ್ಮ ಪಕ್ಷದ ಗ್ಯಾರೆಂಟಿಗಳು ನೆರವಾಗಿವೆ. ಬೇರೆ ವರ್ಗದವರಿಗೆ ಈ ಗ್ಯಾರೆಂಟಿಗಳು ತಲುಪಿದೇ ಇಲ್ಲವು ಗೊತ್ತಿಲ್ಲ ಆದರೆ ಶ್ರಮಿಕ ವರ್ಗದವರಿಗೆ ಮಾತ್ರ ಪೂರ್ಣ ಪ್ರಮಾಣದಲ್ಲಿ ತಲುಪಿದೆ ಎಂದು ಹೇಳಿದರು.ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಂಪತ್ ಕುಮಾರ್, ಎನ್.ಡಿ.ಕುಮಾರ್, ಪ್ರಕಾಶ್ ರಾಮನಾಯ್ಕ, ಮೊಹಮ್ಮದ್ ಯೂಸೂಫ್, ಘಾರಾನ, ಸೈಯದ್ ಆಕ್ಬರ್, ಕುಮಾರ್ ಇದ್ದರು.

**ಫಾಸ್ಟ್ ನ್ಯೂಸ್**

## ಸಂಸದ ಪ್ರಜ್ವಲ್ ರೇವಣ್ಣ, ಹೆಚ್.ಡಿ.ರೇವಣ್ಣ ಕೂಡಲೆ ಬಂಧಿಸಿ: ನಂದಿನಿಗೌಡ

» **ಚಿತ್ರದುರ್ಗ**

ಮಹಿಳೆಯರ ಮೇಲಿನ ಲೈಂಗಿಕ ದೌರ್ಜನ್ಯ ಆರೋಪಕ್ಕೆ ಗುರಿಯಾಗಿರುವ ಹಾಸನ ಸಂಸದ ಪ್ರಜ್ವಲ್ ರೇವಣ್ಣ ಹಾಗೂ ಜೆಡಿಎಸ್.ಶಾಸಕ ಹೆಚ್.ಡಿ.ರೇವಣ್ಣ ಇವರುಗಳನ್ನು ಕೂಡಲೆ ಬಂಧಿಸಿ ಕಾನೂನು ರೀತಿ ಕಠಿಣ ಶಿಕ್ಷೆಗೆ ಒಳಪಡಿಸುವಂತೆ ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಶ್ರೀಮತಿ ಗೀತ ನಂದಿನಿಗೌಡ ಒತ್ತಾಯಿಸಿದ್ದಾರೆ. ಮನೆ ಕೆಲಸದ ಮಹಿಳೆ ಹಾಗೂ ಅವರ ಮಗಳನ್ನು ಲೈಂಗಿಕ ಕ್ರಿಯೆಗೆ ಬಳಸಿಕೊಂಡಿರುವ ಶಾಸಕ ಎಚ್.ಡಿ.ರೇವಣ್ಣ ಹಾಗೂ ಅವರ ಪುತ್ರ ಸಂಸದ ಪ್ರಜ್ವಲ್ ರೇವಣ್ಣ ಇವರುಗಳ ಲೈಂಗಿಕ ಹಗರಣದ ಜಾಡು ಹಿಡಿದು ಎಸ್.ಐ.ಟಿ. ಸೂಕ್ತ ತನಿಖೆ ನಡೆಸಿದರೆ ಇನ್ನೆಷ್ಟು ವಿವಾಹಿತ ಮಹಿಳೆಯರು ಹಾಗೂ ಯುವತಿಯರು ಬಲಿಯಾಗಿದ್ದಾರೆನ್ನುವುದು ಬಹಿರಂಗವಾಗುತ್ತದೆ.

ನಮ್ಮದು ಜಾತ್ಯಾತೀತ ಪಕ್ಷವೆಂದು ಹೇಳಿಕೊಳ್ಳುತ್ತಿರುವ ಮಾಜಿ ಪ್ರಧಾನಿ ಹೆಚ್.ಡಿ.ದೇವೆಗೌಡರ ಕುಟುಂಬದಲ್ಲಿಯೇ ಇಂತಹ ಅನಾಚಾರ ನಡೆಯುತ್ತಿರುವುದರಿಂದ ರಾಜ್ಯದ ಜನ ನಾಚಿ ತಲೆ ತಗ್ಗಿಸುವಂತಾಗಿದೆ. ಬಂಧನದ ಭೀತಿಯಿಂದ ವಿದೇಶಕ್ಕೆ ಪರಾರಿಯಾಗಿ ಜರ್ಮನಿಯಲ್ಲಿ ತಲೆ ಮರೆಸಿಕೊಂಡಿರುವ ಪ್ರಜ್ವಲ್ ರೇವಣ್ಣನನ್ನು ಬಂಧಿಸಿ ರಾಜ್ಯಕ್ಕೆ ಕರೆ ತಂದು ವಿಚಾರಣೆ ನಡೆಸಿ ಶಿಕ್ಷೆಗೆ ಗುರಿಪಡಿಸಬೇಕು. ಇಲ್ಲವಾದಲ್ಲಿ ಮಹಿಳಾ ಕಾಂಗ್ರೆಸ್‌ನಿಂದ ಉಗ್ರ ಪ್ರತಿಭಟನೆ ನಡೆಸಲಾಗುವುದೆಂದರು.

## ಚೆಕ್ ಪೋಸ್ಟ್ ಕರ್ತವ್ಯ ನಿರ್ಲಕ್ಷ್ಯ; ಎಇಇ, ಬಿಲ್ ಕಲೆಕ್ಟರ್ ಅಮಾನತು

» **ದಾವಣಗೆರೆ**

ಚೆಕ್‌ಪೋಸ್ಟ್‌ನಲ್ಲಿ ಕರ್ತವ್ಯ ನಿರ್ವಹಿಸದೇ ನಿರ್ಲಕ್ಷ್ಯ ತೋರಿದಹೊನ್ನಾಳಿವಿಭಾಗದಲೋಕೋಪಯೋಗಿ ಇಲಾಖೆ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಕಣವಪ್ಪ ಮತ್ತು ನ್ಯಾಮತಿ ತಾಲ್ಲೂಕು ಯರಗನಾಳ್ ಗ್ರಾಮ ಪಂಚಾಯಿತಿ ಬಿಲ್ ಕಲೆಕ್ಟರ್ ಲೋಕೇಶ್ ನಾಯ್ಕ ಇವರನ್ನು ಅಮಾನತು ಮಾಡಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ; ವೆಂಕಟೇಶ್ ಎಂ.ವಿ ಆದೇಶಿಸಿದ್ದಾರೆ. ಲೋಕಸಭಾ ಚುನಾವಣೆ ನಡೆಯುತ್ತಿದ್ದು ಮೇ 7 ರಂದು ಮತದಾನ ನಡೆಯಲಿದೆ. ಮಾದರಿ ನೀತಿ ಸಂಹಿತೆಯನ್ನು ಜಾರಿಗೆ ತರಲು ಜಿಲ್ಲೆಯಾದ್ಯಂತ 32 ಚೆಕ್‌ಪೋಸ್ಟ್‌ಗಳನ್ನು ಸ್ಥಾಪಿಸಿ ಮೂರು ಪಾಳಿಯಲ್ಲಿ ಕರ್ತವ್ಯ ನಿರ್ವಹಿಸಲಾಗುತ್ತಿದೆ. ದಾವಣಗೆರೆ, ಶಿವಮೊಗ್ಗದಅಂತರ್‌ಜಿಲ್ಲಾಚೆಕ್‌ಪೋಸ್ಟ್‌ಜೀನಹಳ್ಳಿ ಚೆಕ್‌ಪೋಸ್ಟ್‌ಗೆ ಸದರಿ ಅಧಿಕಾರಿ, ಸಿಬ್ಬಂದಿಗಳನ್ನು ನೇಮಕ ಮಾಡಲಾಗಿತ್ತು. ದಾವಣಗೆರೆ ಕ್ಷೇತ್ರಕ್ಕೆ ಆಯೋಗದಿಂದ ನೇಮಕವಾಗಿರುವ ವಿಶೇಷ ವೆಚ್ಚ ವೀಕ್ಷಕರಾದ ಪ್ರತಿಭಾಸಿಂಗ್ ಮತ್ತು ಹೊನ್ನಾಳಿ ಉಪವಿಭಾಗಾಧಿಕಾರಿ ಹಾಗೂ ಸಹಾಯಕ ಚುನಾವಣಾಧಿಕಾರಿ ಅಭಿಷೇಕ್ ರವರು ಏಪ್ರಿಲ್ 29 ರಂದು ಮಧ್ಯಾಹ್ನ 2.25 ರ ಸಮಯದಲ್ಲಿ ಅನಿರೀಕ್ಷಿತವಾಗಿ ಚೆಕ್‌ಪೋಸ್ಟ್‌ಗೆ ಭೇಟಿ ನೀಡಿದಾಗ ಚೆಕ್‌ಪೋಸ್ಟ್‌ನ ಕರ್ತವ್ಯದಲ್ಲಿ ಯಾರು ಸಹ ಇರಲಿಲ್ಲ. ಈ ಬಗ್ಗೆ ದೂರವಾಣಿ ಕರೆ ಮಾಡಿ ತಿಳಿಸಿದ್ದರೂ ಕರ್ತವ್ಯಕ್ಕೆ ಹಾಜರಾಗಿರಲಿಲ್ಲ. ಚುನಾವಣಾ ಕರ್ತವ್ಯ ನಿರ್ಲಕ್ಷ್ಯತೆ ತೋರಿದ ಸದರಿ ನೌಕರರ ಮೇಲೆ ಪ್ರಜಾ ಪ್ರಾತಿನಿಧ್ಯಕಾಯ್ದೆ 1951 ರ 134 ನಿಯಮದನ್ವಯ ಹಾಗೂ ಸಿಸಿಎ ನಿಯಮ 1957 ರ ನಿಯಮ 10(1)(ಡಿ) ರನ್ವಯ ಅಮಾನತು ಮಾಡಿ ಆದೇಶಿಸಲಾಗಿದೆ.

## ಗೋಪನಹಳ್ಳಿ ಹೋಟಲ್‌ನಲ್ಲಿ ದಾಸ್ತಾನಿದ್ದ ಅಕ್ರಮ ಮದ್ಯ, ವ್ಯಕ್ತಿ ವಶ.



» **ಚಳ್ಳಕೆರೆ**

ಲೋಕಸಭೆ ಚುನಾವಣೆ ನಂತರವೂ ಅಬಕಾರಿ ಇಲಾಖೆ ಅಧಿಕಾರಿಗಳು ತಾಲ್ಲೂಕಿನಾದ್ಯಂತ ಅಕ್ರಮಮದ್ಯ ಮಾರಾಟ ನಿಯಂತ್ರಿಸುವ ನಿಟ್ಟಿನಲ್ಲಿ ನಿರಂತರ ದಾಳಿ ನಡೆಸುವ ಮೂಲಕ ಈ ದಂದೆಗೆ ಕಡಿವಾಣಹಾಕಲುಯಶಸ್ವಿಯಾಗಿದ್ದಾರೆ.ತಾಲ್ಲೂಕಿನ ಗೋಪನಹಳ್ಳಿ ಗ್ರಾಮದ ಬಳಿ ಅಬಕಾರಿ ಇಲಾಖೆ ಅಧಿಕಾರಿಗಳು ದಿಢೀರ್ ದಾಳಿ ನಡೆಸಿ ತಪಾಸಣೆ ನಡೆಸಿದಾಗ ಗ್ರಾಮದ ಅಂಜನಮೂರ್ತಿ ಎಂಬ ವ್ಯಕ್ತಿ ತನ್ನ ಹೋಟೆಲ್‌ನಲ್ಲಿ ಸುಮಾರು 7440ರೂ ಮೌಲ್ಯದ ಅಕ್ರಮ ಮದ್ಯವನ್ನು ಮಾರಾಟ ಮಾಡುವ ಹಿನ್ನೆಲೆಯಲ್ಲಿ ಹೋಟೆಲ್‌ಲ್ಲಿ ದಾಸ್ತಾನು ಮಾಡಿದ್ದು ಅದನ್ನು ಪತ್ತೆಹಚ್ಚಿ ವಶಪಡಿಸಿಕೊಂಡು ಪ್ರಕರಣ ದಾಖಲು ಮಾಡಿದ್ದಾರೆ. ಜಿಲ್ಲಾ ಅಬಕಾರಿ ಉಪ ಆಯುಕ್ತರು, ಹಿರಿಯೂರು ಉಪವಿಭಾಗ ಅಬಕಾರಿ ಉಪಾಧೀಕ್ಷಕರು, ಚಳ್ಳಕೆರೆ ಅಬಕಾರಿ ನಿರೀಕ್ಷಕ ನಾಗರಾಜು ನೇತೃತ್ವದಲ್ಲಿ ಈ ದಾಳಿ ನಡೆದಿದೆ. ದಾಳಿಯಲ್ಲಿ ಅಬಕಾರಿ ಉಪ ನಿರೀಕ್ಷಕರಾದ ಎಸ್.ಎಚ್.ರೇಖಾ, ಸಿಬ್ಬಂದಿಗಳಾದ ಸೋಮಶೇಖರ್, ನಾಗರಾಜು ಮುಂತಾದವರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಶ್ರೀ ಬಿಂದುಮಾಧವ ಶರ್ಮ ಸ್ವಾಮಿಜಿ 78ನೇ ವರ್ಷದ ಜಯಂತಿ



» **ಹೊಸದುರ್ಗ**

ತಾಲೂಕಿನ ಬೆಲಗೂರು ಗ್ರಾಮದ ವಸಿಷ್ಠಾಶ್ರಮದಲ್ಲಿ ಅವದೂತ ಸದ್ಗುರು ಶ್ರೀ ಬಿ ಮಹೋತ್ಸವವು ಂದುಮಾಧವ ಶರ್ಮ ಸ್ವಾಮಿಜಿ ಅವರ 78 ನೇ ವರ್ಷದ ಜಯಂತಿ ಶ್ರೀ ವಿಜಯಮಾರುತಿ ಶರ್ಮ ಗುರುಗಳ ನೇತೃತ್ವದಲ್ಲಿ ವಿಜೃಂಭಣೆಯಿಂದ ನೆರವೇರಿತು. ಶಾಸಕ ಬಿ.ಜಿ.ಗೋವಿಂದಪ್ಪ ಸೇರಿದಂತೆ ಸಹಸ್ರಾರು ಸಂಖ್ಯೆಯ ಭಕ್ತರು ಮಹೋತ್ಸವದಲ್ಲಿ ಪಾಲ್ಗೊಂಡು ಸಂಭ್ರಮಿಸಿದರು. ವಸಿಷ್ಠಾಶ್ರಮದ ಅವದೂತ ಬಿಂದುಮಾಧವ ಶ್ರೀಗಳ ಅಧಿಷ್ಠಾನ ಮಂದಿರದಲ್ಲಿ ವಿಶೇಷ ಧಾರ್ಮಿಕ ಕಾರ್ಯಕ್ರಮಗಳು ನೆರವೇರಿವು. ಯಾಗಶಾಲೆಯಲ್ಲಿ ಲೋಕಕಲ್ಯಾಣಾರ್ಥವಾಗಿ ವಿಶೇಷವಾಗಿ ಮಳೆಗಾಗಿ ಪ್ರಾರ್ಥಿಸಿ ಮೇದಾ ದಕ್ಷಿಣಮೂರ್ತಿ ಹೋಮ ಹಾಗೂ ಅವಹಂತೀ ಹೋಮ, ಮಂತ್ರ ಪಠಣೆ, ಪುರ್ಣಾಹುತಿ ಕಾರ್ಯಕ್ರಮಗಳು ನೆರವೇರಿದವು.

ಬಿಂದುಮಾಧವ ಶ್ರೀಗಳ ಅಧಿಷ್ಠಾನ ಮಂದಿರದಲ್ಲಿರುವ ಗುರುಗಳ ಸ್ಥಿರ ಹಾಗೂ ಚರ ಪಾದುಕೆಗಳಿಗೆ ರುದ್ರಾಭಿಷೇಕ, ಅಲಂಕಾರ ಪೂಜೆ, ಮಹಾ ನೈವೆದ್ಯ, ಅಷ್ಠೋತ್ತರ, ಮಹಾ ಮಂಗಳಾರತಿ ಮತ್ತಿತರ ವಿಶೇಶ ಕಾರ್ಯಕ್ರಮಗಳು ನೆರವೆರಿದವು. ಆಶ್ರಮದ ಮುಖ್ಯ ದೇವತೆ ಅಭಯಾಂಜನೇಯ ಸ್ವಾಮಿ ದೇವಾಲಯ ಹಾಗೂ ಅಭಯ ಗಣಪತಿ ಮಂದಿರದಲ್ಲಿಯೂ ವಿಶೇಷ ಪೂಜಾ ಕಾರ್ಯಗಳು ನಡೆದವು. ಭಕ್ತರು ಸರದಿಯ ಸಾಲಿನಲ್ಲಿ ನಿಂತು ಅದಿಷ್ಠಾನ ಮಂದಿರದಲ್ಲಿ ಗುರುಗಳ ದರ್ಶನ ಪಡೆದರು. ಹೊಸದುರ್ಗದ ಸದ್ಗುರು ಆಶ್ರಮದ ಶ್ರೀ ಕಾಂತಾನಂದ ಸರಸ್ವತಿ ಸ್ವಾಮಿಜಿ, ಸಿಂದಗಿ ಬೀಮಾಶಂಕರ ಮಠದ ಶ್ರೀ ದತ್ತಪ್ಪಯ್ಯ ಸ್ವಾಮಿಜಿ, ಶ್ರೀ ಬ್ರಹ್ಮಾನಂದ ಸ್ವಾಮಿಜಿ ಕಾರ್ಯಕ್ರಮದ ಸಾನಿಧ್ಯವಹಿಸಿ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡರು. ಬಿಂದುಮಾಧವ ಶ್ರೀಗಳ ಉತ್ಸವಮೂರ್ತಿಯ ಪಲ್ಲಕ್ಕಿ ಉತ್ಸವಕ್ಕೆ ಆಶ್ರಮದ ದರ್ಮಾಧಿಕಾರಿ ಗುರುದತ್ತ ಶರ್ಮ ಚಾಲನೆ ನೀಡಿದರು. ಅದಿಷ್ಠಾನ ಮಂದಿರವನ್ನು ವಿಶೇಷವಾಗಿ ಬಂಗಾರ ಬಣ್ಣದ ಅಲಂಕಾರಿಕ ಪರಿಕರಗಳು ಹಾಗೂ ಹೂವುಗಳಿಂದ ಅಲಂಕರಿಸಲಾಗಿತ್ತು. ಭಕ್ತರಿಗೆ ನಿರಂತರ ದಾಸೋಹ ವ್ಯವಸ್ಥೆ ಮಾಡಲಾಗಿತ್ತು. ವಸಿಷ್ಠಾಶ್ರಮದ ಧರ್ಮಾಧಿಕಾರಿ ಶ್ರೀಗುರುದತ್ತ ಶರ್ಮ ಮಾತನಾಡಿ ಭಕ್ತರ ಇಚ್ಛೆ ಹಾಗೂ ಸಂಕಲ್ಪದಿಂದ ಗುರುಗಳ 78 ನೇ ಜಯಂತಿ ಅರ್ಥಪೂರ್ಣವಾಗಿ ನೆರವೆರಿದೆ. ಗುರುಗಳು ತಮ್ಮ ಶಕ್ತಿಯ ಮೂಲಕ ವಸಿಷ್ಠಾಶ್ರಮವನ್ನು ಮುನ್ನೆಡೆಸುತ್ತಿದ್ದಾರೆ. ಇಲ್ಲಿ ನಾವೆಲ್ಲರೂ ನೆಪ ಮಾತ್ರ ಭಗವಂತನ ಇಚ್ಛೆ ಹಾಗೂ ಅದೇಶದಂತೆಯೆ ಎಲ್ಲವೂ ನಡೆಯುತ್ತಿದೆ. ಗುರುಗಳ ಅಭಯಾನುಗ್ರಹಕ್ಕೆ ಬರುವರ ಸಂಖ್ಯೆ ಹೆಚ್ಚಾಗುತ್ತಿರುವುದು ಅವರ ಜಾಗೃತ ಶಕ್ತಿಗೆ ಸಾಕ್ಷಿಯಾಗಿದೆ ಎಂದರು.

### ತಿಮ್ಮಣ್ಣ ನಿಧನ

» **ಹೊಸದುರ್ಗ**



ತಾಲೂಕು ಶ್ರೀ ವೀರ ಮಡಿವಾಳ ಮಾಚಿದೇವ ಸಂಘದಮಾಜಿಅಧ್ಯಕ್ಷರಾಗಿದ್ದ ಹೆಚ್.ಆರ್.ತಿಮ್ಮಣ್ಣ (74) ನವರು ಬುಧವಾರ ಬೆಳಿಗ್ಗೆ ನಿಧನರಾದರು ಕಳೆದ ಎರಡು ತಿಂಗಳಿನಿಂದ ಅನಾರೋಗ್ಯದಿಂದ ಬಳಲುತ್ತಿದ್ದರು.ಸಾಕಷ್ಟು ಭಾರಿ ಆಸ್ಪತ್ರೆಗೆ ತೋರಿಸಿದರೂ ಕೂಡ ಗುಣಮುಖವಾಗಿರಲಿಲ್ಲ. ಮೃತ ತಿಮ್ಮಣ್ಣನವರು ಕಳೆದ ಸುಮಾರು ವರ್ಷಗಳಿಂದ ಮಡಿವಾಳ ಸಮಾಜ ಸಂಘಟನೆಯಲ್ಲಿ ತೊಡಗಿಕೊಂಡು ಸಮಾಜ ಸಂಘಟಿಸುವಲ್ಲಿ ಸತತ ಪ್ರಯತ್ನ ಮಾಡಿದವರಲ್ಲಿ ಇವರೂ ಕೂಡ ಒಬ್ಬರಾಗಿದ್ದರು. ಮೃತ ತಿಮ್ಮಣ್ಣ ಓರ್ವ ಪುತ್ರ ಹಾಗೂ ಅಪಾರ ಬಂಧು ಬಳಗವನ್ನ ಬಿಟ್ಟು ಅಗಲಿದ್ದಾರೆ ಇವರ ಅಂತ್ಯಕ್ರಿಯೆಯು ಇದೇ ದಿನ ಸಂಜೆ ಪಟ್ಟಣದ ಹೊರವಲಯದಲ್ಲಿರುವ ರುದ್ರಭೂಮಿಯಲ್ಲಿ ನೆರವೇರಿತು.

### ವಿಕಲಚೇತನರಿಂದ ಮತದಾನ ಜಾಗೃತಿ

» **ದಾವಣಗೆರೆ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸ್ವೀಪ್ ಸಮಿತಿ ಹಾಗೂ ಜಿಲ್ಲಾ ಕಿವುಡರ ಸಂಘ, ಇವರುಗಳ ವತಿಯಿಂದ ಮೇ 1 ಬುಧವಾರ ನಗರದ ಜಯದೇವ ಸರ್ಕಲ್‌ನಲ್ಲಿ ವಾಕ್ ಮತ್ತು ಶ್ರವಣದೋಷವುಳ್ಳ ವಿಕಲಚೇತನರಿಂದ ಹಮ್ಮಿಕೊಂಡ ಮತದಾನ ಜಾಗೃತಿಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಸುರೇಶ್ ಬಿ. ಇಟ್ನಾಳ್ ಹಸಿರು ನಿಶಾನೆ ತೋರಿಸಿ ಚಾಲನೆ ನೀಡಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಮಲ್ಲನಾಯಕ್, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಎಚ್. ಅರುಣ್ ಕುಮಾರ್, ಜಿಲ್ಲಾ ವಿಶೇಷ ಚೇತನರ ಹಾಗೂ ಹಿರಿಯ ನಾಗರಿಕ ಇಲಾಖೆ ಉಪನಿರ್ದೇಶಕ ಕೆ.ಕೆ. ಡಾ. ಪ್ರಕಾಶ್, ಕಿವುಡ ಸಂಘದ ಅಧ್ಯಕ್ಷ ಆಸಿಫ್ ಭಾಗವಹಿಸಿದ್ದರು.

---

#### ಮಟಮಟ ಮಧ್ಯಾಹ್ನಕ್ಕೆ ರಸ್ತೆಗಳು ಭಣಭಣ. ಶೇ.50ಕ್ಕೂ ಹೆಚ್ಚು ವ್ಯಾಪಾರ ಕುಸಿತ

# ವಹಿವಾಟಕ್ಕೂ ತಟ್ಟಿದ ಕೆಂಡದಂತಹ ಬಿಸಿಲಿನ ಧಗೆ

» **ಮಹದೇವಪುರ ಶಿವಮೂರ್ತಿ**



ಪರಶುರಾಂಪುರ : ನೆತ್ತಿ ಸುಡುವ ಬಿಸಿಲು, ಬಿಸಿ ಗಾಳಿಯ ಜತೆಗೆ ಬಿಸಿಲಿನ ತಾಪಕ್ಕೆ ಬಯಲು ಸೀಮೆಯ ಜನರು ಹೈರಾಣಾಗಿದ್ದು, ವ್ಯಾಪಾರ–ವಹಿವಾಟಿಗೂ ಬಿಸಿ ತಟ್ಟಿದೆ.ಗ್ರಾಹಕರಿಲ್ಲದೆ ರಸ್ತೆಗಳು ಭಣಗುಡುತ್ತಿದ್ದು,ವ್ಯಾಪಾರಿಗಳು ನಷ್ಟ ಅನುಭವಿಸುವಂತಾಗಿದೆ.

ರಾಜ್ಯ ಹಾಗೂ ನೆರೆ ಆಂಧ್ರಪ್ರದೇಶದ ಗಡಿ ಪರಶುರಾಂಪುರದಲ್ಲಿ ದ್ವಿಭಾಷಿಕರ ವಹಿವಾಟು ಕೇಂದ್ರ ಸ್ಥಾನವಾಗಿದ್ದು, ಸದಾ ಜನಜಂಗುಳಿಯಿಂದಿರುವ ಪ್ರದೇಶದಲ್ಲಿ ಮಟಮಟ ಮಧ್ಯಾಹ್ನಕ್ಕೆ ರಸ್ತೆಗಳು ಭಣಭಣ.

ಪ್ರತಿ ವರ್ಷ ಬೇಸಿಗೆಯಲ್ಲಿ ಉಷ್ಣಾಂಶವು 34 ಡಿಗ್ರಿ ಸೆಲ್ಸಿಯಸ್ ದಾಟುತ್ತಿರಲಿಲ್ಲ. ಈ ಸಲ ಮಳೆ ಅಭಾವ, ಬರದ ಹಿನ್ನೆಲೆಯಲ್ಲಿ ತಾಪಮಾನ 40ಡಿಗ್ರಿ ದಾಟಿ ದಾಖಲೆ ಮಟ್ಟಕ್ಕೆ ಏರಿಕೆಯಾಗಿದೆ. ದಿನದಿಂದ ದಿನಕ್ಕೆ ಏರುತ್ತಿರುವ ಬಿಸಿಲಿನ ಧಗೆಯಿಂದಾಗಿ ಜನರು ಮನೆಯಿಂದ ಹೊರಬರುತ್ತಿಲ್ಲ.

ಬಿಸಿಲಿನಿಂದಾಗಿ ಜನರು ತಮ್ಮ ನಿತ್ಯದ ಖರೀದಿ ಮತ್ತು ಇನ್ನಿತರೆ ಕೆಲಸ ಕಾರ್ಯಗಳಿಗಾಗಿ ಬೆಳಗ್ಗೆ ಮತ್ತು ಸಂಜೆ ಮಾತ್ರ ಮನೆಯಿಂದ ಹೊರಬರುತ್ತಿದ್ದಾರೆ. ಹೀಗಾಗಿ, ಬೆಳಗ್ಗೆ 10 ರಿಂದ ಸಂಜೆ 5ರವರೆಗೆ ರಸ್ತೆಗಳಲ್ಲಿ ಜನರ ಓಡಾಟ ಕಡಿಮೆಯಾಗಿದೆ.ಬಿಸಿಲಿನ ಧಗೆಯಿಂದಾಗಿ ಜನರು ವಾಣಿಜ್ಯ ಮಳಿಗೆಗಳತ್ತ ಮುಖ ಮಾಡುತ್ತಿಲ್ಲ.ಪರಿಣಾಮ,ವ್ಯಾಪಾರ–ವಹಿವಾಟು ಶೇ.50ಕ್ಕೂ ಹೆಚ್ಚು ಕುಸಿದಿದ್ದು, ವ್ಯಾಪಾರಿಗಳು ಗ್ರಾಹಕರಿಗಾಗಿ ಕಾಯುವಂತಾಗಿದೆ. ತಂಪು ಪಾನೀಯ, ಜ್ಯೂಸ್, ಐಸ್‌ಕ್ರೀಂ ವ್ಯಾಪಾರ ಕಡೆ ತಕ್ಕಮಟ್ಟಿಗೆ ವ್ಯಾಪಾರವಾಗುತ್ತಿದೆ. ಬಿಸಿಲಿನ ಝಳಕ್ಕೆ ಬಸ್‌ಗಳಲ್ಲೂ ಮಧ್ಯಾಹ್ನದ ವೇಳೆ ಸಂಚರಿಸುವ ಪ್ರಯಾಣಿಕರ ಸಂಖ್ಯೆ ವಿರಳವಾಗಿದೆ.

**ಬೀದಿ ವ್ಯಾಪಾರಕ್ಕೆ ತಟ್ಟಿದ ಬಿಸಿ:** ಬೀದಿಬದಿ ವ್ಯಾಪಾರಿಗಳಿಗೂ ಬಿಸಿಲಿನ ಬಿಸಿ ತಟ್ಟಿದೆ. ನಿತ್ಯದ ದುಡಿಮೆಯನ್ನೆ ನೆಚ್ಚಿಕೊಂಡು ಬದುಕುತ್ತಿರುವವ್ಯಾಪಾರಿಗಳುಗ್ರಾಹಕರಿಲ್ಲದೆ ನಷ್ಟ ಅನುಭವಿಸುವಂತಾಗಿದೆ. ಕೆಲವರು ಬೆಳಗ್ಗೆ ಮತ್ತು ಸಂಜೆ ವೇಳೆ ಮಾತ್ರ ವ್ಯಾಪಾರ ಮಾಡುತ್ತಾರೆ. ಬಿಸಿಲಿನಿಂದಾಗಿ ಹಣ್ಣು, ತರಕಾರಿ, ಸೊಪ್ಪು, ಹೂ ಬೇಗ ಹಾಳಾಗುತ್ತಿವೆ. ಇದರಿಂದ ವ್ಯಾಪಾರಿಗಳು ನಷ್ಟಕ್ಕೀಡಾಗುತ್ತಿದ್ದಾರೆ.

ದಿನದಿಂದ ದಿನಕ್ಕೆ ಏರುತ್ತಿರುವ ಬಿಸಿಲಿನಿಂದಾಗಿ ಜನರು ಮನೆಯಿಂದ ಹೊರಬರುತ್ತಿಲ್ಲ.ಮಳೆ ಅಭಾವ, ಬರದ ನಡುವೆಯೂ ಮಾರುಕಟ್ಟೆಗೆ ಬರುತ್ತಿರುವ ಹೂ, ಹಣ್ಣು, ತರಕಾರಿ, ಸೊಪ್ಪು ಬಿಸಿಲಿನ ಬೇಗೆಗೆ ಒಣಗಿ ಹೋಗುತ್ತಿದ್ದು, ನಷ್ಟದ ಪ್ರಮಾಣ ಮತ್ತಷ್ಟು ಜಾಸ್ತಿಯಾಗಿದೆ ಎಂಬುದು ವ್ಯಾಪಾರಸ್ಥರ ಮಾತು.

---

## ಬೇಸಿಗೆ ಬಿಸಿಲು: ಜಾನುವಾರುಗಳನ್ನು ಬೆಳಿಗ್ಗೆ 11 ಗಂಟೆಯೊಳಗೆ ಮೇಯಿಸಿ ತಂಪಾದ ಸ್ಥಳದಲ್ಲಿ ಕಟ್ಟಿ

» **ಚಿತ್ರದುರ್ಗ**



ಈ ವರ್ಷದ ಬೇಸಿಗೆ ಬಿಸಿಲು ಅತಿಯಾಗಿರುವುದರಿಂದ ಕುರಿ–ಮೇಕೆ ಇನ್ನಿತರೆ ಜಾನುವಾರುಗಳನ್ನು ಬೆಳಿಗ್ಗೆ ಆರು ಗಂಟೆಯಿಂದ 11 ಗಂಟೆಯೊಳಗೆಹೊರಗಡೆ ಮೇಯಿಸಿ ದಿನಕ್ಕೆ ಮೂರರಿಂದ ನಾಲ್ಕು ಸಾರಿ ಶುದ್ದ ನೀರನ್ನು ಕುಡಿಸಿ ರಕ್ಷಣೆ ಮಾಡಿಕೊಳ್ಳುವಂತೆ ಜಾನುವಾರು ಸಾಕಾಣಿಕೆಯಲ್ಲಿ ತೊಡಗಿರುವವರಿಗೆ ಚಳ್ಳಕೆರೆ ತಾಲ್ಲೂಕು ನೇರ್ಲಗುಂಟೆ ಪಶು ಆಸ್ಪತ್ರೆ ಜಾನುವಾರು ಅಧಿಕಾರಿ ವಿ.ಎ.ಪ್ರಕಾಶ್‌ರೆಡ್ಡಿ ಸೂಚಿಸಿದ್ದಾರೆ.

ಜಾನುವಾರುಗಳನ್ನು ಮರದ ಕೆಳಗೆ ಅಥವಾ ಕೊಟ್ಟಿಗೆಯಲ್ಲಿ ತಂಪಾದ ಸ್ಥಳದಲ್ಲಿ ಕಟ್ಟಬೇಕು. ಕೊಟ್ಟಿಗೆ ಮೇಲ್ಭಾಗದಲ್ಲಿ ತೆಂಗನ ಗರಿಗಳನ್ನು ಹರಡುವುದರಿಂದ ಬಿಸಿಲಿನ ತಾಪ ಕಡಿಮೆಯಾಗಲಿದೆ. ನೀರಿನ ಲಭ್ಯತೆಯಿದ್ದರೆ ದಿನಕ್ಕೆ ಒಂದೆರಡು ಸಾರಿ ಜಾನುವಾರುಗಳ ಮೈತೊಳೆಯಬಹುದು. ಉತ್ತಮ ಎಮ್ಮೆ ಮತ್ತು ಮಿಶ್ರ ತಳಿ ಹಸುಗಳಿಗೆ ನೀರಿನಲ್ಲಿ ನೆನೆಸಿದ ಗೋಣಿ ಚೀಲಗಳನ್ನು ಹೊದಿಸಿ ಆಗಾಗ್ಗೆ ನೀರು ಸಿಂಪಡಿಸುವುದರಿಂದ ಹಾಲಿನ ಇಳುವರಿ ಹೆಚ್ಚುತ್ತದೆ. ಬಿಸಿಲಿನ ತಾಪದಿಂದ ರಕ್ಷಿಸಬಹುದೆಂದು ತಿಳಿಸಿದರು. ಒಂದು ಕೆ.ಜಿ. ಕಡಲೆಕಾಯಿ ಹಿಂಡಿಯನ್ನು 50 ಲೀಟರ್ ನೀರಿನಲ್ಲಿ ನೆನೆಸಿ ನೂರು ಕುರಿಗಳಿಗೆ ಕುಡಿಸ 'ಬೇಕು. 3–4 ನಾಲ್ಕು ಕೆ.ಜಿ.ಜೋಳ ಅಥವಾ ಮುಸುಕಿನ ಜೋಳದ ಕಾಳುಗಳನ್ನು ತಿನ್ನಿಸುವುದು. ಅಗಸೆ, ನುಗ್ಗೆ, ಸೂಬಾಬುಲ್‌ನಂತಹ ಮೇವನ್ನು ಕೊಡಬೇಕು. ಜಾನುವಾರುಗಳು ಕುಡಿಯುವ ನೀರಿನ ತೊಟ್ಟಿಗೆ ಸುಣ್ಣ ಬಳಿದು ಸ್ವಚ್ಚಗೊಳಿಸಬೇಕು. ಹೀಗೆ ಮಾಡುವುದರಿಂದ ಜಾನುವಾರುಗಳನ್ನು ಬಿಸಿಲಿನ ಝಳದಿಂದ ಕಾಪಾಡಬಹುದು ಎಂದು ಜಾನುವಾರುಗಳ ಮಾಲೀಕರುಗಳಿಗೆ ಹೇಳಿದರು.

## ಚಿಕ್ಕೋಡಿ ಅಭ್ಯರ್ಥಿಪರ ಶಾಸಕ ಟಿ.ರಘುಮುರ್ತಿ ವ್ಯಾಪಕ ಪ್ರಚಾರ



» **ಚಳ್ಳಕೆರೆ**

ಕರ್ನಾಟಕ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ 20ಕ್ಕೂ ಹೆಚ್ಚು ಸ್ಥಾನಗಳಲ್ಲಿ ಗೆಲುವು ಸಾಧಿಸುವ ಗುರಿಯನ್ನು ಹೊಂದಿದ್ದು, ಈ ಗುರಿಯನ್ನು ತಲುಪಲು ಪಕ್ಷದ ಮುಖಂಡರು, ಕಾರ್ಯಕರ್ತರು ಹಗಲಿರುಳು ಶ್ರಮಿಸುತ್ತಿದ್ದು, ರಾಜ್ಯದ ಮತದಾರರ ಒಲವು ಸಹ ಕಾಂಗ್ರೆಸ್ ಪಕ್ಷದ ಕಡೆ ಹೆಚ್ಚಾಗುತ್ತಿದೆ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು. ಅವರು, ಚಳ್ಳಕೆರೆ ವಿಧಾನಸಭಾ ಕ್ಷೇತ್ರದಲ್ಲಿ ಪಕ್ಷದ ಅಭ್ಯರ್ಥಿ ಬಿ.ಎನ್. ಚಂದ್ರಪ್ಪ ಪರ ಬಿರುಸಿನ ಪ್ರಚಾರ ಕೈಗೊಂಡ ನಂತರ ರಾಜ್ಯ ಕೆಪಿಸಿಸಿ ಸೂಚನೆ ಮೇರೆಗೆ ಚಿಕ್ಕೋಡಿ ಲೋಕಸಭಾ ಕ್ಷೇತ್ರಕ್ಕೆ ಚುನಾವಣಾ ಪ್ರಚಾರಕ್ಕೆ ತೆರಳಿದ್ದು, ಲೋಕೋಪಯೋಗಿ ಸಚಿವ ಸತೀಶ್‌ಜಾರಕಿಹೊಳಿ ಪುತ್ರಿ, ಪಕ್ಷದ ಅಭ್ಯರ್ಥಿ ಪ್ರಿಯಾಂಕ ಜಾರಕಿಹೊಳಿ ಪರ ಕ್ಷೇತ್ರದ ವೆಂಕಟೇಶ್ವರ ನಗರದಲ್ಲಿ ಹೊಸದುರ್ಗ ಕ್ಷೇತ್ರದ ಶಾಸಕ ಬಿ.ಜಿ.ಗೋವಿಂದಪ್ಪರವರ ಜೊತೆಗೆ ಮತಯಾಚನೆ ಮಾಡಿದರು. ಚಿಕ್ಕೋಡಿ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಮುಖಂಡರು, ಕಾರ್ಯಕರ್ತರು ಶಾಸಕ ಟಿ.ರಘುಮೂರ್ತಿ ಮತ್ತು ಬಿ.ಜಿ.ಗೋವಿಂದಪ್ಪರವರನ್ನು ಹಾರ್ಥಿಕವಾಗಿ ಸ್ವಾಗತಿಸಿ ಪಕ್ಷದ ಕಾರ್ಯಕ್ಕೆ ಆಗಮಿಸಿದ ಹಿನ್ನೆಲೆಯಲ್ಲಿ ಅವರನ್ನು ಅಭಿನಂದಿಸಿದರು. ಇನ್ನೂ ಎರಡು ದಿನಗಳ ಕಾಲ ಈ ಕ್ಷೇತ್ರದಲ್ಲಿ ಪ್ರಚಾರ ಕೈಗೊಳ್ಳುವುದಾಗಿ ಶಾಸಕ ಟಿ.ರಘುಮೂರ್ತಿ ತಿಳಿಸಿದರು.

---

## ವೀರಶೈವ ಸಂಘಟನೆಗಳ ಒಕ್ಕೂಟದಿಂದ 2 ದಿನ ಬಸವ ಜಯಂತಿ

» **ಚಳ್ಳಕೆರೆ**



ಪ್ರತಿವರ್ಷದಂತೆ ಈ ವರ್ಷವೂ ತಾಲ್ಲೂಕು ವೀರಶೈವ ಸಂಘಟನೆಗಳ ಒಕ್ಕೂಟ ಹಾಗೂ ಗ್ರಾಮಾಂತರ ವೀರಶೈವ ಸಂಘದ ವತಿಯಿಂದ ವಿಶ್ವದ ಜ್ಞಾನದ ಸಾಂಸ್ಕೃತಿಕ ನಾಯಕ ಜಗಜ್ಯೋತಿ ಬಸವೇಶ್ವರರಜಯಂತೋತ್ಸವಕಾರ್ಯಕ್ರಮವನ್ನು ಎರಡು ದಿನಗಳ ಕಾಲ ನಡೆಸಲಾಗುವುದು ಎಂದು ಸಂಘದ ಅಧ್ಯಕ್ಷ ಕೆ.ಸಿ.ನಾಗರಾಜು, ಕಾರ್ಯದರ್ಶಿ ಎಚ್.ವಿ.ಪ್ರಸನ್ನಕುಮಾರ್ ತಿಳಿಸಿದ್ದಾರೆ.

ಅವರು ಈ ಬಗ್ಗೆ ಮಾಹಿತಿ ನೀಡಿ, ಮೇ.9ರ ಗುರುವಾರ ಬೆಳಗ್ಗೆ 7.30ಕ್ಕೆ ಜಿ.ಎಸ್.ಬಸವರಾಜುರವರಿಂದ ಷೇಠ್‌ಸ್ಥಳ ಧ್ವಜಾರೋಹಣದಿಂದ ಕಾರ್ಯಕ್ರಮ ಆರಂಭ, ಬಸವೇಶ್ವರ ವೃತ್ತದ ಬಸವಣ್ಣನವರ ಪ್ರತಿಮೆಗೆ ಮಾಲಾರ್ಪಣೆ, ಬೆಳಗ್ಗೆ 10.30ಕ್ಕೆ ವೀರಶೈವ ಸಮಾಜದ ಮಹಿಳೆಯರು, ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮ ಅನುಭವ ಮಂಟಪದ ವೇದಿಕೆಯಲ್ಲಿ ವೀರಶೈವ ಮಹಿಳಾ ಸಂಘದ ಅಧ್ಯಕ್ಷೆ ಪದ್ಮನಾಗರಾಜು ಅಧ್ಯಕ್ಷತೆಯಲ್ಲಿ ನಡೆಯಲಿದೆ. ಉಪನ್ಯಾಸಕಿ ಸುಮತಿ ಜಯಪ್ಪ ಉಪನ್ಯಾಸ ನೀಡಲಿದ್ದು, ವಿಶೇಷ ಆಹ್ವಾನಿತರಾಗಿ ವೀರಶೈವ ಮಹಿಳಾ ಸಮಾಜದ ಕಾರ್ಯದರ್ಶಿ ಮಂಜುಳಾಕೆ.ಸಿ.ನಾಗರಾಜು, ಗೌರವಾಧ್ಯಕ್ಷ ಅನ್ನಪೂರ್ಣಪ್ರಕಾಶ್, ಮಾಜಿ ಅಧ್ಯಕ್ಷೆ ಪಾರ್ವತಮ್ಮಮಂಡಿಮಠ, ಗ್ರಾಮಾಂತರ ಅಧ್ಯಕ್ಷ ಕಿರಣ್‌ಶಂಕರ್, ವೀರಶೈವ ವಿದ್ಯಾರ್ಥಿನಿಲಯ ಅಧ್ಯಕ್ಷ ಎನ್.ಸತೀಶ್‌ಬಾಬು, ವೀರಶೈವ ಬ್ಯಾಂಕ್ ಅಧ್ಯಕ್ಷ ಎಸ್.ಜಯಪ್ರಕಾಶ್, ದಲ್ಲಾಲರ ಸಂಘದ ಅಧ್ಯಕ್ಷ ಕೆ.ಎಂ.ಅರವಿಂದ, ಕೆಜಿಟಿ ಸುರೇಶ್, ಎಂ.ವಿ.ವಿಜಯೇಂದ್ರ, ಕೆ.ನಾಗೇಶ್, ಕೆ.ಜಿ.ತಿಪ್ಪೇಸ್ವಾಮಿ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸುವರು. ಮೇಲ್ಛಾವಣಿ ದಾನಿ ನೇತ್ರಸುರೇಶ್‌ರವರನ್ನು ಸನ್ಮಾನಿಸಲಾಗುವುದು.

ಮೇ.10ರ ಶುಕ್ರವಾರ ಬೆಳಗ್ಗೆ 11ಕ್ಕೆ ಧಾರ್ಮಿಕ ಸಭೆ ಆಯೋಜಿಸಿದ್ದು ಮೈಸೂರಿನ ರಾಜನಹಳ್ಳಿಯ ಬಸವಧ್ಯಾನ ಮಂದಿರದ ಬಸವಲಿಂಗಮೂರ್ತಿ ಸ್ವಾಮಿಗಳ ದಿವ್ಯಸಾನಿಧ್ಯದಲ್ಲಿ ಕಾರ್ಯಕ್ರಮ ನಡೆಯಲಿದ್ದು, ಅಧ್ಯಕ್ಷೆಯನ್ನು ಸಂಘದ ಅಧ್ಯಕ್ಷ ಕೆ.ಸಿ.ನಾಗರಾಜು ವಹಿಸುವರು, ಸಹ ಪ್ರಾಧ್ಯಾಪಕ ಡಾ.ಎ.ಮೋಹನ್ ಉಪನ್ಯಾಸ ನೀಡುವರು. ವಿಶೇಷ ಆಹ್ವಾನಿತರಾಗಿ ವೀರಶೈವ ಲಿಂಗಾಯಿತ ನೌಕರರ ಸಂಘದ ಅಧ್ಯಕ್ಷ ಸಿ.ಗುರುಸಿದ್ದಮೂರ್ತಿ, ವಿ.ಮಂಜುನಾಥ, ಎಚ್.ಪ್ರಸನ್ನಕುಮಾರ್, ವಕೀಲರ ಸಂಘದ ಅಧ್ಯಕ್ಷ ಕೆ.ಎಂ.ನಾಗರಾಜು, ರಿಯಲ್‌ಎಸ್ಟೇಟ್ ಉದ್ಯಮಿ ರೇವಣ್ಣ, ಎಚ್. ಎಲ್.ಅಶೋಕ್, ಸತ್ಯಾನಂದ, ನಗರಸಭಾ ಸದಸ್ಯ ಸಿ.ಎಂ.ವಿಶುಕುಮಾರ್ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸುವರು.



**ದಾವಣಗೆರೆ ಹರಪನಹಳ್ಳಿ ತಾಲೂಕಿನ ಸಿಂಗ್ರಿಹಳ್ಳಿ ತಾಂಡದಲ್ಲಿ ಮದುವೆ ಊಟ ಸೇವಿಸಿ ಅಸ್ವಸ್ಥಗೊಂಡು ಜಿಲ್ಲಾಸ್ಪತ್ರೆಗೆ ದಾಖಲಾಗಿದ್ದ ಅಸ್ವಸ್ಥರುನ್ನು ಲೋಕಸಭಾ ಸದಸ್ಯ ಡಾ.ಜಿ.ಎಂ.ಸಿದ್ದೇಶ್ವರ್ ಭೇಟಿಯಾಗಿ ಆರೋಗ್ಯ ವಿಚಾರಿಸಿದರು.**

---

**ಪ್ರಮುಖ ಸುದ್ದಿ**

# ಬಿಸಿಗಾಳಿಗೆ ತತ್ತರಿಸಿದ ಕೋಟೆನಾಡು

» **ಮೊದಲ ಪುಟದಿಂದ**

25–30 ರೂ ಇದ್ದ ಎಳನೀರು 40 ಗಡಿ ದಾಟುತ್ತಿದೆ.ಚಿಕ್ಕ ಪುಟ್ಟ ಹೋಟೆಲ್ ನಲ್ಲಿ ಒಂದು ಗ್ಲಾಸ್ ಮಜ್ಜಿಗೆ 15 ರೂ ಮಾರಟ ಮಾಡಿದರೇ ದೊಡ್ಡ ಹೋಟೇಲ್‌ಗಳಲ್ಲಿ ಒಂದು ಗ್ಲಾಸ್ 40–50 ಮಾರಟ ಮಾಡುತ್ತಿದ್ದಾರೆ. ಇನ್ನೂ ಹಣ್ಣಿನ ಜ್ಯೂಸ್ ಗೂ ಸಹ ಮೊರೆ ಹೋಗುತ್ತಿದ್ದು ಸಾಕಪ್ಪ ಸಾಕು ಎನ್ನುತ್ತಿದ್ದಾರೆ.

**ಕೂಲಿ ಕಾರ್ಮಿಕರು ಬಿಸಿಲಿನ ತಾಪಕ್ಕೆ ಸುಸ್ತು:** ನಿತ್ಯ ಕೂಲಿನಕಾರ್ಮಿಕರು ಬಿಸಿಲಿನಲ್ಲಿ ಅತಿ ಹೆಚ್ಚು ಕಾಲ ದುಡಿಯುತ್ತಾರೆ. ಅಂತಹ ಕಾರ್ಮಿಕರಿಗೆ ಬಿಸಿಲಿನ ಮುಟ್ಟಿದೆ. 8 ರಿಂದ 10 ಗಂಟೆ ದುಡಿಯುತ್ತಿದ್ದರು ಸುಸ್ತು ಆಗುತ್ತಿರಲಿಲ್ಲ ಆದರೆ ಈಗ 2–3 ಗಂಟೆಗೆ ಹೈರಾಣಗುತ್ತಿದ್ದಾರೆ.

**ಎಲೆಕ್ಟ್ರಾನಿಕ್ ಅಂಗಡಿಗಳಲ್ಲಿ ಫ್ಯಾನ್ ಗೆ ಹೆಚ್ಚಿದ ಡಿಮ್ಯಾಂಡ್** : ಪ್ರತಿ ವರ್ಷ ಮನೆಯಲ್ಲಿ ಇರುವ ಬಿಸಣಿಕೆ , ಚಿಕ್ಕ ಫ್ಯಾನ್, ಮನೆ ಕಿಟಕಿ ಬಾಗಿಲು ತೆಗೆದು ಬೇಸಿಗೆಯ ತಾಪ ಕಡಿಮೆ ಮಾಡಿಕೊಳ್ಳುತ್ತಿದ್ದರು. ಆದರೆ ಈ ಬಾರಿ ಒಬ್ಬರ ಪಕ್ಕ ಒಬ್ಬರು ಕೂತರೇ ಸಾಕು




ಮತ್ತಷ್ಟು ತಾಪ ಹೆಚ್ಚತ್ತಿದ್ದು ರೂಂ ,ಹಾಲ್ , ಹೀಗೆ ಎಲ್ಲಾ ಕಡೆ ಒಂದೊಂದು ಫ್ಯಾನ್ ಬಳಸುತ್ತಿದ್ದು ಫ್ಯಾನ್ ಗಳಿಗೆ ಭಾರೀ ಡಿಮ್ಯಾಂಡ್ ಬಂದಿದೆ.ಇಷ್ಟಾದರೂ ಸಹ ಮನೆಗಳಲ್ಲಿ ಫ್ಯಾನ್‌ಗಳು ನಿರಂತರ ತಿರುಗುಗಿ ತಂಪಾಗಿಸಲು ಪ್ರಯತ್ನಿಸುತ್ತಿದ್ದರು ಸಹ ಒಂದು ಟೈಮ್ ಮುಗಿದ ಮೇಲೆ ಅಲ್ಲಿಂದ ಬಿಸಿ ಗಾಳಿಯೇ ಹೊರಬರುತ್ತಿದ್ದು, ತಂಗಾಳಿ ಮಾಯವಾಗಿದೆ.

**ಹವಮಾನ ಇಲಾಖೆ ಹೇಳಿದಿಷ್ಟು:** ಜಿಲ್ಲೆಯಲ್ಲಿ ಪ್ರಖರ ಬಿಸಿಲು ಕಂಡುಬರುತ್ತಿರುವ ಹಿನ್ನೆಲೆಯಲ್ಲಿ ಮಧ್ಯಾಹ್ನದ 1ರಿಂದ ಸಂಜೆ 4ರವರೆಗೆ ವೃದ್ಧರು, ಮಕ್ಕಳು, ಗರ್ಭಿಣಿ ಮತ್ತು ದೀರ್ಘಕಾಲಿನ ಕಾಯಿಲೆಗಳಿಗೆ ಔಷಧ ಸೇವಿಸುವ ಪ್ರತಿಯೊಬ್ಬರೂ ಹೊರಗಡೆ ಹೋಗುವುದನ್ನು ತಪ್ಪಿಸಬೇಕು. ಈ ಮೂಲಕ ಸೂರ್ಯಾಘಾತದ ಅನಾಹುತದಿಂದ ಪಾರಾಗಬಹುದು ಎಂದು ಆರೋಗ್ಯ ಇಲಾಖೆ ಮನವಿ ಮಾಡಿದೆ.

**ಆರೋಗ್ಯ ಇಲಾಖೆ ಸಿದ್ದತೆ ಹೇಗಿದೆ:** 'ಜಿಲ್ಲೆಯ ಎಲ್ಲ ಆರೋಗ್ಯ ಕೇಂದ್ರಗಳಲ್ಲಿ ನಿರ್ಜಲೀಕರಣ ತಡೆಗಟ್ಟಲು ಓಆರ್‌ಎಸ್ ಪುಡಿಯನ್ನು ಅಗತ್ಯವುಳ್ಳವರಿಗೆ ಕೊಡುವ ವ್ಯವಸ್ಥೆ ಮಾಡಲಾಗಿದೆ. ರೋಗಿಗಳ ಆರೈಕೆಗಾಗಿ, ಐವಿ ಫ್ಲುಯಿಡ್ಸ್ ಮತ್ತು ಜೀವರಕ್ಷಕ ಔಷಧಗಳ ದಾಸ್ತಾನು ಇಟ್ಟುಕೊಳ್ಳಲಾಗಿದೆ. ಓಆರ್‌ಎಸ್ ದ್ರಾವಣವನ್ನು 1 ಲೀಟರ್ ನೀರಿಗೆ 1 ಪೊಟ್ಟಣದ ಸಂಪೂರ್ಣ ಪುಡಿಯನ್ನು ಹಾಕಿ 24 ಗಂಟೆಯೊಳಗೆ ಕುಡಿಯಲು ಬಳಸುವ ಮೂಲಕ ಬಿಸಿಲಿನ ಪ್ರಖರತೆಯಿಂದ ಉಂಟಾಗುವ ನಿರ್ಜಲೀಕರಣವನ್ನು ತಡೆಯಬಹುದು' ಎಂದು ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಚಂದ್ರಶೇಖರ್ ಕಂಬಾಳಿಮಠ ತಿಳಿಸಿದ್ದಾರೆ.

**ಮನೆಯಿಂದ ಹೊರ ಬರುವಾಗ ಮರೆಯದಿರಿ ಈ ವಸ್ತುಗಳು:** ಹವಾಮಾನ ಇಲಾಖೆ ಆರೇಂಜ್ ಅಲರ್ಟ್ ಘೋಷಿಸಿರುವ ಕಾರಣ ಜನರು ಅಗತ್ಯವೆನಿಸುವ ಸಂದರ್ಭಗಳಲ್ಲಿ ಮನೆಯಿಂದ ಹೊರ ಬರುವಾಗ ಶುದ್ಧ ಕುಡಿಯುವ ನೀರು, ಛತ್ರಿ ತೆಗೆದುಕೊಂಡು ಹೋಗಬೇಕು. ಮಕ್ಕಳನ್ನು ಕರೆದುಕೊಂಡು ಹೋಗುವಾಗ ಮಕ್ಕಳಿಗೆ ಆದಷ್ಟು ತಲೆಯ ಮೇಲೆ ನೀರಿನಿಂದ ಒದ್ದೆ ಬಟ್ಟೆ ಹಾಕಬೇಕು. ಮಕ್ಕಳ ಆರೋಗ್ಯದಲ್ಲಿ ಏರುಪೇರು ಆಗದಂತೆ ಕಾಳಜಿ ವಹಿಸಬೇಕು ಎಂದು ಮನವಿ ಮಾಡಿದೆ.




# ಸಾಧನೆಯ ಶಿಖರವೇರಲು ನಾವು ಮಾಡಬೇಕಾದ ಪ್ರಯತ್ನ

ಎತ್ತರದ ಬೆಟ್ಟದ ಮೇಲೆ ನಿಂತು ಕೆಳಗೆ ನೋಡಿದಾಗ ಗಿಡ ಮರಗಳು ಮುಖ್ಯವಾಗಿ ಮನುಷ್ಯರು ಅತ್ಯಂತ ಚಿಕ್ಕದಾಗಿ ಕಾಣುತ್ತಾರೆ.........

ಇದನ್ನೇ ಒಂದು ಸಂಕೇತವಾಗಿ ಬಳಸಿಕೊಂಡು ನೋಡಿದಾಗ............

ನಾವು ಸಾಧನೆಯಲ್ಲಿ ಎತ್ತರೆತ್ತರಕ್ಕೆ ಏರಿದಾಗ ನಮ್ಮ ಸುತ್ತಮುತ್ತಲಿನ ಜನ ನಮಗಿಂತ ಕೆಳಗಿರುವಂತೆ ಭಾಸವಾಗುತ್ತದೆ.........

ನಮ್ಮನ್ನು ಪ್ರೀತಿಸುವ, ನಮ್ಮ ಯಶಸ್ಸಿಗೆ ಸಂತೋಷಿಸುವ, ನಮಗೆ ಮಾರ್ಗದರ್ಶನ ಮಾಡುವ ಜನರ ನಡುವೆ ನಾವು ಎಲ್ಲೇ ಇದ್ದರೂ ನೆಮ್ಮದಿಯಿಂದ ಇರುತ್ತೇವೆ..........

ಆದರೆ,

ನಾನಾ ಕಾರಣಗಳಿಂದ ನಮ್ಮನ್ನು ದ್ವೇಷಿಸುವ, ಅಸೂಯೆ ಪಡುವ, ನಮ್ಮ ಕಾಲೆಳೆಯುವ, ನಮಗೆ ತೊಂದರೆ ಕೊಡುವ ಜನರ ನಡುವೆ ನಾವು ವಾಸಿಸುವುದು ಕಷ್ಟವಾದಾಗ ನಾವು ಸಾಧನೆಯ ಬೆಟ್ಟವನ್ನು ಏರಲು ಪ್ರಯತ್ನಿಸಬೇಕು...........

ಇಲ್ಲದಿದ್ದರೆ ಈ ಜನರ ನಡುವೆ ನಮ್ಮ ಬದುಕು ಅಸಹನೆಯಿಂದಲೇ ಮುಗಿದು ಹೋಗುತ್ತದೆ.......

ಹಾಗಾದರೆ ಸಾಧನೆ ಎಂದರೇನು ?

ನಮ್ಮ ಸಾಮಾನ್ಯ ಜನರ ಭಾವನೆಯಲ್ಲಿ ಹೆಚ್ಚು ಹೆಚ್ಚು ಹಣ ಮಾಡುವುದು, ಉನ್ನತ ಅಧಿಕಾರಕ್ಕೆ ಏರುವುದು, ಅಪಾರ ಆಸ್ತಿ ಮಾಡುವುದು, ಪ್ರಶಸ್ತಿಗಳನ್ನು ಪಡೆಯುವುದು, ಜನಪ್ರಿಯತೆ ಗಳಿಸುವುದು,

ಒಟ್ಟಿನಲ್ಲಿ ನಮ್ಮ ಸಮಕಾಲೀನ ಇತರರಿಗಿಂತ ನೋಡುಗರ ದೃಷ್ಟಿಯಲ್ಲಿ ಹೆಚ್ಚು ಹೆಸರು ಮಾಡುವುದು ಎಂದಾಗಿದೆ.......

ಈ ರೀತಿಯ ಸಾಧನೆ ಮಾಡುವ ಅವಕಾಶವಿದ್ದು ಒಂದು ವೇಳೆ ನಾವು ಅದರಲ್ಲಿ ಯಶಸ್ವಿಯಾದರೆ, ನಾವು ಯಾವುದೇ ಸ್ಥಳದಲ್ಲಿ ಇದ್ದರೂ ಗೌರವ ಘನತೆಗೇನು ಕುಂದು ಬರುವುದಿಲ್ಲ........

ಅನೇಕ ಕಾರಣಗಳಿಗಾಗಿ ನಾವು ಈ ರೀತಿಯ ಸ್ಥಾನ ಮಾನ ಪಡೆಯಲು ಸಾಧ್ಯವಾಗದಿದ್ದಾಗ, ನಮ್ಮ ನಡುವಿನ ಇತರರು ಈ ವ್ಯಾವಹಾರಿಕ ಜಗತ್ತಿನಲ್ಲಿ ನಮಗಿಂತ ಮುಂದೆ ಹೋಗಿ ನಮ್ಮನ್ನು



ಕೀಳಾಗಿ ಕಂಡಾಗ ಅಥವಾ ನಮ್ಮ ಮನಸ್ಸು ಹಾಗೆ ಭಾವಿಸಿದಾಗ ನಾವು ಎತ್ತರದ ಪ್ರದೇಶಕ್ಕೆ ಹೋಗಲು ಪ್ರಯತ್ನಿಸಬೇಕು......

ಅದು ಹೇಗೆ ಸಾಧ್ಯ.?

ಈ ಯಾವುದೇ ಅನುಕೂಲಗಳು ನಮಗೆ ಇಲ್ಲದಿರುವಾಗ ಸಾಧನೆಯ ಮೆಟ್ಟಿಲು ಹತ್ತುವುದು ಹೇಗೆ ???????

ಖಂಡಿತ ಸಾಧ್ಯವಿದೆ.....

ನಮ್ಮ ಇಡೀ ವ್ಯಕ್ತಿತ್ವವನ್ನು ಪುನರ್ ರೂಪಿಸಿಕೊಳ್ಳಬೇಕು ಮತ್ತು ಉನ್ನತೀಕರಿಸಿಕೊಳ್ಳಬೇಕು.

ಹೇಗೆಂದರೆ...........

ಹೆಚ್ಚು ನಿರೀಕ್ಷೆಗಳನ್ನೇ ಇಟ್ಟುಕೊಳ್ಳದೆ ನಿರ್ಲಿಪ್ತತೆ ಅಥವಾ ಸ್ಥಿತ ಪ್ರಜ್ಞತೆಯನ್ನು ಬೆಳೆಸಿಕೊಳ್ಳಬೇಕು.......

ಯಾವುದೇ ಸಂಧರ್ಭದಲ್ಲಿಯೂ ಯಾರ ಮೇಲೆಯೂ ಅವಲಂಬಿತವಾಗುವ ಅಥವಾ ಯಾವುದನ್ನಾದರೂ ಬೇಡುವ ಪರಿಸ್ಥಿತಿಯನ್ನು ತಿರಸ್ಕರಿಸಬೇಕು.

ಈ ಪರಿಸ್ಥಿತಿಯಲ್ಲಿಯೂ ಅನಿರೀಕ್ಷಿತವಾಗಿ ಕೆಲವು ಆಕರ್ಷಣೆಗಳು ಮತ್ತು ಅನುಕೂಲಕರ ಲಾಭಗಳು ನಮಗೆ ಒಲಿಯಬಹುದು. ಅವುಗಳನ್ನು ನಮ್ಮ ಘನತೆಗೆ ತಕ್ಕುದಾದ ಮತ್ತು ಭವಿಷ್ಯದ ನಮ್ಮ ಸ್ವಾಭಿಮಾನದ ಬದುಕಿಗೆ ತೊಂದರೆಯಾಗದೆ ಇದ್ದರೆ ಮಾತ್ರ ಸ್ವೀಕರಿಸಬೇಕು. ಇಲ್ಲದಿದ್ದರೆ ನಮ್ಮ ಮನೋಬಲ ಉಪಯೋಗಿಸಿ ತಿರಸ್ಕರಿಸಬೇಕು.

ಈ ಹಂತದಲ್ಲಿ ಸಾಂಪ್ರದಾಯಿಕ ಶೈಲಿಯ ಜನರ ನಡುವೆ ಇರುವುದಕ್ಕಿಂತ ಏಕಾಂತದ ವಾತಾವರಣದಲ್ಲಿ ನಮ್ಮ ಸಮಯ ಕಳೆಯುವಂತೆ ನಮ್ಮ ಮನಸ್ಸಿನ ಅರಮನೆಗೆ ನಾವೇ ರಾಜರಾಗಬೇಕು.....

ಸಮಾಜದ ಸುತ್ತ ನಾವು ಸುತ್ತುವುದಕ್ಕಿಂತ ನಮ್ಮ ಸುತ್ತ ಸಮಾಜ ಸುತ್ತುವ ಸ್ವಯಂ ಅಹಂ ರೂಪಿಸಿಕೊಳ್ಳಬೇಕು. ನಮಗೆ ಆಸಕ್ತಿದಾಯಕ ಕ್ಷೇತ್ರವನ್ನು ಆರಿಸಿಕೊಂಡು ಅದರಲ್ಲಿ ತಪಸ್ಸಿನಂತೆ ನಿರಂತರವಾಗಿ ತೊಡಗಿಸಿಕೊಳ್ಳಬೇಕು. ಅದರಲ್ಲಿ ಸಾಧನೆ ಮಾಡುವ ಯಾವ ಅವಕಾಶವನ್ನೂ ಕಳೆದುಕೊಳ್ಳಬಾರದು.

ಎಲ್ಲಕ್ಕಿಂತ ಮುಖ್ಯವಾಗಿ ಸಾವಿನ ಭಯವನ್ನು ಕಡಿಮೆ ಮಾಡಿಕೊಂಡು ಅದನ್ನು ಸ್ವೀಕರಿಸಲು ಮಾನಸಿಕವಾಗಿ ಸಿದ್ದರಾಗಬೇಕು. ಸಾವಿನ ನಂತರದ ಅಂಶಗಳ ಬಗ್ಗೆ ಯೋಚಿಸಲೇಬಾರದು.

ಇದು ಎಲ್ಲವನ್ನೂ ತ್ಯಜಿಸಿ ಸನ್ಯಾಸಿಯಾಗುವ ಸ್ಥಿತಿಯಲ್ಲ. ಸಾಧನೆಗಾಗಿ ರೂಪಿಸಿಕೊಳ್ಳುವ ಸರಳ ಮಾನಸಿಕ ಜೀವನಶೈಲಿ......

ಆಗ ನಮ್ಮನ್ನು ಹಿಡಿಯಲು ಅಥವಾ ನಿಯಂತ್ರಿಸಲು ಯಾರಿಗೂ ಸಾಧ್ಯವಾಗುವುದಿಲ್ಲ.


ಏನೂ ಇಲ್ಲದ ಸಂಧರ್ಭದಲ್ಲಿಯೂ ಇದನ್ನು ಕಟ್ಟುನಿಟ್ಟಾಗಿ ಪಾಲಿಸಿದರೆ ಕನಿಷ್ಠ ಮಟ್ಟದ ಸರಳ ಜೀವನಶೈಲಿ ನಮ್ಮದಾದರೆ ನಮ್ಮ ವ್ಯಕ್ತಿತ್ವ ತಾನೇತಾನಾಗಿ ಮೇಲಕ್ಕೇರುತ್ತದೆ. ನಮ್ಮ ಬಡತನದ, ಸೋಲಿನ, ಅಸಹಾಯಕತೆಯ ಜೀವನ ನೋಡಿ ಅಸೂಯೆ ಪಡುವ ವ್ಯಂಗ್ಯ ಮಾಡುವ ಜನ, ತಮ್ಮ ವ್ಯಾವಹಾರಿಕ ಮತ್ತು ಸಂಭಂದಗಳ ಏರಿಳಿತಗಳಿಂದ ಬಸವಳಿದಾಗ ನಮ್ಮ ನೆಮ್ಮದಿಯ ಜೀವನ ಅವರಿಗೆ ಸೋಜಿಗದಂತೆ ಕಾಣುತ್ತದೆ. ಅವರುಗಳು ನಮ್ಮ ವ್ಯಕ್ತಿತ್ವದ ಮುಂದೆ ಸಣ್ಣವರಾಗಿ ಕಾಣುತ್ತಾರೆ. ಅದೇ ನಮ್ಮ ಬಹುದೊಡ್ಡ ಆತ್ಮವಿಶ್ವಾಸ.

ಮಾನಸಿಕವಾಗಿ ನಾವು ಏರುವ ಎತ್ತರಕ್ಕೆ ಯಾವುದೇ ಮಿತಿಯೂ ಇಲ್ಲ..........

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,

ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,

ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ ಪರಿವರ್ತನೆಗಾಗಿ, ಮನಸ್ಸುಗಳ ಅಂತರಂಗದ ಚಳವಳಿ,



■ ಲೇಖನ
ವಿವೇಕಾನಂದ. ಹೆಚ್.ಕೆ.
9844013068

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T